ಸತ್ಯದ ಕಡೆಗೆ...ಜನರ ಧ್ವನಿಯಾಗಿ...

PGRI No: KNKAN/26/A3111

ಕೊಡಗು ಟೈಮ್ಸ್

ಸಂಪಾದಕರು: ದಿಲೀಪ್.ಆರ್
Editor: DILEEP.R
ಮೊ: 8747042921

KODAGU TIMES MORNING DAILY PAPER
E-mail: officialkodagutimes@gmail.com

ಮುಂಜಾನೆ ದಿನಪತ್ರಿಕೆ

ಸಂಪುಟ–1	ಸಂಚಿಕೆ–73	ದಿನಾಂಕ: 22-09-2026, ಮಂಗಳವಾರ	ಪುಟ: 04	ಬೆಲೆ ರೂ. 2.00
Volume-1	Issue-73	Date: 22-09-2026, Tuesday	Page-04	Price: Rs. 2.00

ಆಡಳಿತ –ವಿಪಕ್ಷಗಳ ವಾಕ್ಸಮರ



ಬೆಂಗಳೂರು: ಕಸ್ತೂರಿ ರಂಗನ್ ವರದಿ ಹಾಗೂ ಬರದ ಬಗ್ಗೆ ಚರ್ಚೆ ನಡೆಸಲು ಇಂದಿನಿಂದ ಆರಂಭವಾಗಿರುವ ವಿಧಾನ ಮಂಡಲದ ಅಧಿವೇಶನದಲ್ಲಿ ಮೊದಲ ದಿನವೇ ಆಡಳಿತ ಮತ್ತು ವಿಪಕ್ಷಗಳ ನಡುವೆ ಭಾರೀ ವಾಕ್ಸಮರ ನಡೆಯಿತು.

ಈ ಅಧಿವೇಶನವನ್ನು ವಿಶೇಷ ಅಧಿವೇಶನ ಎಂದು ಕರೆದಿರುವುದು ನಿಯಮಾವಳಿಗೆ ವಿರುದ್ಧ, ಇದು ಮುಂದುವರೆದ ಅಧಿವೇಶನವೇ, ಇಲ್ಲವೇ ವಿಶೇಷ ಎಂಬುದನ್ನು ಸ್ಪಷ್ಟಪಡಿಸಿ. ವಿಶೇಷ ಅಧಿವೇಶನ ಕರೆಯಲು ನಿಯಮಾವಳಿಯಲ್ಲಿ ಅವಕಾಶ ಇಲ್ಲ. ವಿಶೇಷ ಚರ್ಚೆಗೆ ನಮ್ಮ ತಕರಾರಿಲ್ಲ. ಯಾವ ನಿಯಮದಡಿ ಚರ್ಚೆ ಮಾಡಬೇಕು ಎಂಬುದನ್ನು ಸ್ಪಷ್ಟಪಡಿಸಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹಿಸಿದ್ದು ಮಾತಿನ ಚಕಮಕಿಗೆ ಕಾರಣವಾಗಿ ಸದನದಲ್ಲಿ ಸ್ವಲ್ಪಮಟ್ಟಿನ ಕಾವೇರಿದ ಚರ್ಚೆಗೆ ಎಡೆ ಮಾಡಿಕೊಟ್ಟಿತು.

ಪ್ರತಿಪಕ್ಷ ನಾಯಕರ ಮಾತಿಗೆ ನಿಯಮಾವಳಿಗಳನ್ನು ಉಲ್ಲೇಖಿಸಿ ಉತ್ತರ ನೀಡಿದ ಕೃಷ್ಣ ಬೈರೇಗೌಡ ಅವರು, ನಮಗೆ ಪ್ರತಿಷ್ಠೆ ಇಲ್ಲ. ವಿಶೇಷ ಅಧಿವೇಶನ ಎಂಬುದು ನನ್ನಿಂದಾದ ತಪ್ಪಾಗಿದೆ. ಆ ತಪ್ಪನ್ನು ಒಪ್ಪಿಕೊಳ್ಳುತ್ತೇವೆ ಎಂದು ಹೇಳಿ, ಈ ಕುರಿತ ಕಾವೇರಿದ ಚರ್ಚೆಗೆ ತೆರೆ ಎಳೆದರು.

ಇದಕ್ಕೂ ಮೊದಲು ನಿಲುವಳಿ ಸೂಚನೆ ಮಂಡನೆ ವಿಚಾರದಲ್ಲೂ ಪ್ರತಿಪಕ್ಷ ನಾಯಕ ಆರ್. ಅಶೋಕ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಚಿವ ಕೃಷ್ಣ ಬೈರೇಗೌಡರ ನಡುವೆ ವಾಗ್ವಾದವೇ ನಡೆಯಿತು.

ಇಂದು ಸದನ ಆರಂಭವಾಗಿ ಸಂತಾಪ, ಕಾಗದ ಪತ್ರಗಳ ಮಂಡನೆ ಮುಗಿದ ನಂತರ ಪ್ರತಿಪಕ್ಷ ನಾಯಕರಾದ ಆರ್. ಅಶೋಕ್ ಅವರು ಕಸ್ತೂರಿ ರಂಗನ್ ವರದಿಗೆ ಸಂಬಂಧಿಸಿದಂತೆ ನಿಲುವಳಿ ಸೂಚನೆ ಪ್ರಸ್ತಾಪಕ್ಕೆ ಮುಂದಾದಾಗ ಸಚಿವರಾದ ಕೃಷ್ಣ ಬೈರೇಗೌಡ ಅವರು ಎದ್ದುನಿಂತು ನಿಲುವಳಿ ಸೂಚನೆ ಅವಶ್ಯ ಇಲ್ಲ. ಅದೇ ವಿಚಾರದ ಬಗ್ಗೆ ಸದನದಲ್ಲಿ ವಿಶೇಷ ಚರ್ಚೆ ಇದೆ. ನಿಲುವಳಿ ಕೈಗೆತ್ತಿಕೊಳ್ಳಲು ಬರಲ್ಲ ಎಂದು ಹೇಳಿದರು.

ಆದರೆ ಅದನ್ನು ಒಪ್ಪದ ಪ್ರತಿಪಕ್ಷ ನಾಯಕರು ನಿಲುವಳಿ ಪ್ರಸ್ತಾವಕ್ಕೆ ಅವಕಾಶ ಕೊಡಬೇಕು. ನಂತರ ಅದು ಬರುತ್ತದೋ, ಇಲ್ಲವೋ ಎಂಬುದನ್ನು ಸಭಾಧ್ಯಕ್ಷರು ತೀರ್ಮಾನ ಮಾಡಬೇಕು. ಅದು ಬಿಟ್ಟು ಅವಕಾಶವೇ ಕೊಡುವುದಿಲ್ಲ ಎನ್ನುವುದು ಸರಿಯಲ್ಲ ಎಂದು ಹೇಳಿದರು.

ಈ ಹಂತದಲ್ಲಿ ಬಿಜೆಪಿಯ ಸುನೀಲ್‌ಕುಮಾರ್, ಡಾ. ಸಿ.ಅಶ್ವತ್ಥ್‌ನಾರಾಯಣ, ಅರವಿಂದ ಬೆಲ್ಲದ ಇವರೆಲ್ಲಾ ಪ್ರತಿಪಕ್ಷ ನಾಯಕರ ಬೆಂಬಲಕ್ಕೆ ನಿಂತು, ಮೊದಲು ಮಾತನಾಡಲು ಅವಕಾಶ ಕೊಡಿ, ನಂತರ ತೀರ್ಮಾನ ಮಾಡಿ. ನಿಲುವಳಿ ಸೂಚನೆಯಡಿ ಮಾತನಾಡಲು ಅವಕಾಶ ಕೊಡದೇ ತೀರ್ಮಾನ ಮಾಡುವುದು ಸರಿಯಲ್ಲ ಎಂದು ಹೇಳಿದರು.

ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಸದನದಲ್ಲಿ ಸ್ವಲ್ಪಮಟ್ಟಿಗೆ ಗದ್ದಲದ ವಾತಾವರಣ ರೂಪುಗೊಂಡಿತು.

ನಂತರ ಮಾತು ಮುಂದುವರೆಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ವಿಶೇಷ ಅಧಿವೇಶನ ಇಲ್ಲವೇ ಮುಂದುವರೆದ ಅಧಿವೇಶನ ಎಂಬುದನ್ನು ಸ್ಪಷ್ಟಪಡಿಸಿ. ನಾನು ನನ್ನ ನಿಲುವಳಿ ಸೂಚನಾ ಪ್ರಸ್ತಾವವನ್ನು ವಾಪಸ್ ಪಡೆಯಲು ಸಿದ್ಧ. ಇದರಲ್ಲಿ ನನಗೆ ಯಾವುದೇ ಪ್ರತಿಷ್ಠೆ ಇಲ್ಲ. ಕಸ್ತೂರಿ ರಂಗನ್ ವರದಿಯ ಬಗ್ಗೆ ಒಂದು ದಿನ ಅಲ್ಲ, ಮೂರು ದಿನ ಮಾತನಾಡಲು ನಾವು ಸಿದ್ಧರಿದ್ದೇವೆ. ಆದರೆ ಸರ್ಕಾರವೇ ಒಂದು ದಿನಕ್ಕೆ ಚರ್ಚೆಯನ್ನು ಸೀಮಿತಗೊಳಿಸಿದೆ ಎಂದು ಹೇಳಿದರು.

ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಸಚಿವ ಕೃಷ್ಣಬೈರೇಗೌಡ ಅವರು, ವಿಶೇಷ ಅಧಿವೇಶನ, ಮುಂದುವರೆದ ಅಧಿವೇಶನ ಎಲ್ಲವೂ ಸರಿ. ಇದು ಮುಂದುವರೆದ ಅಧಿವೇಶನ ಎಂದು ಹೇಳಿದಾಗ, ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ತಾವು ನಿಲುವಳಿ ಸೂಚನೆ ಪ್ರಸ್ತಾವವನ್ನು ವಾಪಸ್ ಪಡೆದಿರುವುದಾಗಿ ಹೇಳಿ, ಕಸ್ತೂರಿ ರಂಗನ್ ವರದಿಯ ವಿಶೇಷ ಚರ್ಚೆಗೆ ಅನುವು ಮಾಡಿಕೊಟ್ಟರು.

ಕಾಂತಪ್ಪಗೆ ಪಿಎಚ್‌ಡಿ ಪದವಿ



ಮಡಿಕೇರಿ: ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಹುಳಗೋಳ ಗ್ರಾಮದ ದಿವಂಗತ ಹೊಸಳ್ಳಿ ಭೀಮರಾಯ ಅವರ ಕಿರಿಯ ಪುತ್ರರಾದ ಕಾಂತಪ್ಪ ಅವರು ರಸಾಯನಶಾಸ್ತ್ರ ವಿಭಾಗದಲ್ಲಿ ಮಂಡಿಸಿದ ಪಿಎಚ್.ಡಿ. ಮಹಾಪ್ರಬಂಧಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ, ಘಟಕ ಕಾಲೇಜಾದ ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜಿನ ರಸಾಯನಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾದ ಕಾಂತಪ್ಪ ಅವರು ಮಂಡಿಸಿದ "A Voltammetric Determination of Some Electroactive Molecules Using Carbon-Based Electrodes, ಎಂಬ ಸಂಶೋಧನಾ ಪ್ರಬಂಧಕ್ಕೆ ಮಂಗಳೂರು ವಿಶ್ವವಿದ್ಯಾನಿಲಯವು ಪಿ.ಎಚ್.ಡಿ. ಪದವಿ ನೀಡಿದೆ.

ಇವರು ರಸಾಯನಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ಜೆ.ಜಿ.ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ಸಂಶೋಧನೆಯನ್ನು ನಡೆಸಿದ್ದಾರೆ.

ಹೆಚ್ಚುತ್ತಿರುವ ಕಾಡಾನೆ ಹಾಗೂ ಹುಲಿ ದಾಳಿ: ಬಿಜೆಪಿ ಮೋರ್ಚಾ ಅಧ್ಯಕ್ಷ ಕಳವಳ



ವಿರಾಜಪೇಟೆ: ಕೊಡಗು ಜಿಲ್ಲೆಯಲ್ಲಿ ದಿನೇ ದಿನೇ ಹೆಚ್ಚುತ್ತಿರುವ ಕಾಡಾನೆ ಹಾಗೂ ಹುಲಿ ದಾಳಿಗಳ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿರುವ ಕೊಡಗು ಜಿಲ್ಲಾ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷರಾದ ಅಮ್ಮುಣಿಚಂಡ ರಂಜಿ ಪೂಣಚ್ಚ ಅವರು, ಜನರ ಹಾಗೂ ಸಾಕುಪ್ರಾಣಿಗಳ ಜೀವ ರಕ್ಷಣೆಗೆ ಸರಕಾರ ಮತ್ತು ಅರಣ್ಯ ಇಲಾಖೆ ತಕ್ಷಣವೇ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

"ಜಿಲ್ಲೆಯಲ್ಲಿ ರೈತರು, ಕಾರ್ಮಿಕರು ಹಾಗೂ ಸಾಕುಪ್ರಾಣಿಗಳ ಜೀವಕ್ಕೆ ಬೆಲೆ ಇಲ್ಲದಂತಾಗಿದೆ. ನಿರಂತರವಾಗಿ ವನ್ಯಜೀವಿ ದಾಳಿಗಳು ನಡೆಯುತ್ತಿದ್ದರೂ ಸರಕಾರ ಮತ್ತು ಅರಣ್ಯ ಇಲಾಖೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳುತ್ತಿಲ್ಲ. ಜನರ ಜೀವ ಹೋದ ನಂತರ ಕೇವಲ ಪರಿಹಾರ ನೀಡುವುದಷ್ಟೇ ಸರಕಾರದ ಜವಾಬ್ದಾರಿಯಲ್ಲ, ಜೀವಹಾನಿ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸುವುದು ಮೊದಲ ಆದ್ಯತೆಯಾಗಬೇಕು"ಎಂದು ಅವರು ಆಕ್ರೋಶ ಹೊರಹಾಕಿದ್ದಾರೆ.

"ಇದು ರಾಜಕೀಯ ಮಾಡುವ ಸಮಯವಲ್ಲ. ಜಿಲ್ಲೆಯ ಶಾಸಕರು ರಾಜಕೀಯವನ್ನು ಬದಿಗಿಟ್ಟು ಒಮ್ಮೆ ಕೊಡಗಿನ ಜನರ ಮತ್ತು ಸಾಕುಪ್ರಾಣಿಗಳ ಜೀವದ ಬಗ್ಗೆ ಗಂಭೀರವಾಗಿ ಚಿಂತಿಸಬೇಕು. ಜನರ ಜೀವ ಉಳಿಸಲು ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕಾಗಿದೆ. ಇದು ಕೊಡಗಿನ ಜನರ ಬದುಕು ಮತ್ತು ಜೀವದ ಪ್ರಶ್ನೆ"ಎಂದು ಅವರು ಹೇಳಿದ್ದಾರೆ.

ವನ್ಯಜೀವಿ ದಾಳಿಯಲ್ಲಿ ಮೃತಪಟ್ಟವರ ಕುಟುಂಬಗಳಿಗೆ ನೀಡುತ್ತಿರುವ ಪರಿಹಾರವನ್ನು ಗಣನೀಯವಾಗಿ ಹೆಚ್ಚಿಸಬೇಕು. ಗಾಯಾಳುಗಳಿಗೆ ಚಿಕಿತ್ಸಾ ವೆಚ್ಚ ಸೇರಿದಂತೆ ಸಮರ್ಪಕ ಪರಿಹಾರ ನೀಡಬೇಕು. ಬೆಳೆ, ಜಾನುವಾರು ಮತ್ತು ಇತರ ಆಸ್ತಿ ನಷ್ಟಕ್ಕೆ ವಾಸ್ತವಿಕ ಮೌಲ್ಯಕ್ಕೆ ಅನುಗುಣವಾಗಿ ಪರಿಹಾರವನ್ನು ತ್ವರಿತವಾಗಿ ವಿತರಿಸಬೇಕು. ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳು ಅಪಾಯದ ಪ್ರದೇಶಗಳಿಗೆ ನಿಯಮಿತವಾಗಿ

–3ನೇ ಪುಟಕ್ಕೆ

ವಿಪತ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ



ಮಡಿಕೇರಿ: ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿಯ ಎನ್‌ಸಿಸಿ, ಎನ್‌ಎಸ್‌ಎಸ್ ಹಾಗೂ ವೈಆರ್‌ಸಿ ಘಟಕಗಳ ಸಹಯೋಗದಲ್ಲಿ "ವಿಪತ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ"ವು ಸೋಮವಾರ ಕಾಲೇಜಿನಲ್ಲಿ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಎನ್‌ಡಿಆರ್‌ಎಫ್‌ನ ಇನ್ಸ್‌ಪೆಕ್ಟರ್ ಪ್ರದೀಪ್ ಕುಮಾರ್ ಅವರು ಭಾಗವಹಿಸಿ ವಿದ್ಯಾರ್ಥಿಗಳು ಹಾಗೂ ಸ್ವಯಂ ಸೇವಕರಿಗೆ ವಿಪತ್ತು ನಿರ್ವಹಣೆ ಮತ್ತು ರಕ್ಷಣಾ ಕಾರ್ಯಗಳ ಕುರಿತು ಮಹತ್ವದ ಮಾಹಿತಿ ನೀಡಿದರು.

ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ಪಡೆ ದೇಶದಾದ್ಯಂತ ವಿವಿಧ ರೀತಿಯ ನೈಸರ್ಗಿಕ ಹಾಗೂ ಮಾನವ ನಿರ್ಮಿತ ವಿಪತ್ತುಗಳ ಸಂದರ್ಭದಲ್ಲಿ ರಕ್ಷಣಾ ಮತ್ತು ಪರಿಹಾರ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಎನ್‌ಡಿಆರ್‌ಎಫ್ ತಂಡವು ಅಗತ್ಯ ಸಂದರ್ಭಗಳಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿಯೂ ರಕ್ಷಣಾ ಕಾರ್ಯಗಳಲ್ಲಿ ಭಾಗವಹಿಸಿದ್ದು, ಹಲವಾರು ವಿಪತ್ತು ಸಂದರ್ಭಗಳಲ್ಲಿ ಅನೇಕ ಅಮೂಲ್ಯ ಜೀವ ರಕ್ಷಿಸಿದೆ ಎಂದು ಹೇಳಿದರು.

ವಿಪತ್ತು ಸಂಭವಿಸಿದ ಸಂದರ್ಭದಲ್ಲಿ ಸ್ಥಳೀಯ ಸಮುದಾಯದ ಜನರು ಸಾಮಾನ್ಯವಾಗಿ ಮೊದಲು ಸ್ಥಳದಲ್ಲೇ ಲಭ್ಯವಿರುವುದರಿಂದ, ವಿಪತ್ತು ನಿರ್ವಹಣೆ, ಪ್ರಥಮ ಚಿಕಿತ್ಸೆ ಹಾಗೂ ಜೀವ ರಕ್ಷಿಸುವ ಮೂಲಭೂತ ಕೌಶಲ್ಯಗಳ ಕುರಿತು ಜ್ಞಾನ ಹೊಂದಿರುವುದು ಅತ್ಯಂತ ಅಗತ್ಯ ಎಂದು ಅವರು ತಿಳಿಸಿದರು. ಇಂತಹ ಜ್ಞಾನ ಮತ್ತು ತರಬೇತಿ ಹೊಂದಿರುವವರು ತುರ್ತು ಸಂದರ್ಭದಲ್ಲಿ ಗಾಯಗೊಂಡವರನ್ನು ರಕ್ಷಿಸಲು ಹಾಗೂ ಅಮೂಲ್ಯ ಜೀವಗಳನ್ನು ಉಳಿಸಲು ಸಹಕರಿಸಬಹುದು ಎಂದು ಹೇಳಿದರು.

ವಿದ್ಯಾರ್ಥಿಗಳು ಮತ್ತು ಸ್ವಯಂ ಸೇವಕರು ಅಗತ್ಯ ತರಬೇತಿ ಪಡೆದು ಎನ್‌ಡಿಆರ್‌ಎಫ್ ಹಾಗೂ ಇತರ ರಕ್ಷಣಾ ತಂಡಗಳೊಂದಿಗೆ ಕೈಜೋಡಿಸಿ ವಿಪತ್ತು ಸಂದರ್ಭದಲ್ಲಿ ರಕ್ಷಣಾ ಕಾರ್ಯಗಳಲ್ಲಿ ಸಹಕರಿಸುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಬಹುದು ಎಂದು ಅವರು ಪ್ರೇರೇಪಿಸಿದರು.

ಎನ್‌ಡಿಆರ್‌ಎಫ್ ನ ರಕ್ಷಣಾ ಕಮಾಂಡರ್ ನಾಗರಾಜು ಎ.ಪಿ., ಅವರು ವಿದ್ಯಾರ್ಥಿಗಳಿಗೆ ವಿಪತ್ತು ನಿರ್ವಹಣೆ ಮತ್ತು ರಕ್ಷಣಾ ಕಾರ್ಯಗಳ ಕುರಿತು ವಿವರವಾದ ತರಬೇತಿ ನೀಡಿದರು.

ಎನ್‌ಡಿಆರ್‌ಎಫ್ ತಂಡವು ವಿವಿಧ ವಿಪತ್ತು ಸಂದರ್ಭಗಳಲ್ಲಿ ಕೈಗೊಂಡ

–2ನೇ ಪುಟಕ್ಕೆ

ಕೊಡ್ಲಿಪೇಟೆ ಪ್ರತಿಭಟನೆಗೆ ಮಣಿದ ತಾಲೂಕು ನಿರ್ವಹಣಾಧಿಕಾರಿ

ಪಿಡಿಓ ವರ್ಗಾವಣೆಗೆ ಶಿಫಾರಸು ಭರವಸೆ





ಕೊಡ್ಲಿಪೇಟೆ: ಗ್ರಾಮ ಪಂಚಾಯಿತಿ ಆಡಳಿತದ ನಿರ್ಲಕ್ಷ್ಯ, ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದನೆಯ ಕೊರತೆ ಹಾಗೂ ವಿವಿಧ ಆರೋಪಗಳನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ, ವಿವಿಧ ಸಂಘ–ಸಂಸ್ಥೆಗಳು ಹಾಗೂ ಸಾರ್ವಜನಿಕರ ನೇತೃತ್ವದಲ್ಲಿ ಸೋಮವಾರ ಕೊಡ್ಲಿಪೇಟೆಯಲ್ಲಿ ಪ್ರತಿಭಟನೆ ನಡೆಯಿತು. ಪ್ರತಿಭಟನೆಗೆ ಬೆಂಬಲ ಸೂಚಿಸಿದ ವ್ಯಾಪಾರಸ್ಥರು ಸುಮಾರು ಒಂದು ಗಂಟೆ ಕಾಲ ಸ್ವಯಂಪ್ರೇರಿತವಾಗಿ ಅಂಗಡಿ–ಮುಂಗಟ್ಟುಗಳನ್ನು ಬಂದ್ ಮಾಡಿದರು.

ಪ್ರತಿಭಟನಾಕಾರರ ಮನವಿಗೆ ಸ್ಪಂದಿಸಿದ ಸೋಮವಾರಪೇಟೆ ತಾಲೂಕು ನಿರ್ವಹಣಾಧಿಕಾರಿ ಪರಮೇಶ್ ಕುಮಾರ್ ವಿ. ಅವರು, ಕೊಡ್ಲಿಪೇಟೆ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (PDO) ಅವರನ್ನು ವರ್ಗಾವಣೆ ಮಾಡುವಂತೆ ಮೇಲಧಿಕಾರಿಗಳಿಗೆ ಶಿಫಾರಸು ಮಾಡುವುದಾಗಿ ಭರವಸೆ ನೀಡಿದರು.

ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಮಂಥರ್ ಗೌಡ ಅವರು ಕೂಡ ಪ್ರತಿಭಟನಾಕಾರರನ್ನು ದೂರವಾಣಿ ಮೂಲಕ ಸಂಪರ್ಕಿಸಿ, PDO ವರ್ಗಾವಣೆ ಕುರಿತು ಕ್ರಮ ಕೈಗೊಳ್ಳುವ ಬಗ್ಗೆ ಮಾಹಿತಿ ನೀಡಿದ್ದಾರೆ ಎಂದು ಪ್ರತಿಭಟನಾಕಾರರು ತಿಳಿಸಿದ್ದಾರೆ.

ಎಸ್‌ಡಿಎಂಸಿ ಅಧ್ಯಕ್ಷ ವಸಂತ್ ಮಾತನಾಡಿ, ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ವಿಳಂಬಗೊಳಿಸಲಾಗುತ್ತಿದೆ ಹಾಗೂ ಅಧಿಕಾರಿಯವರು ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು. ಪಂಚಾಯಿತಿ ಕಚೇರಿಯಲ್ಲಿ ನಡೆಯಬೇಕಾದ ಕೆಲವು ಕೆಲಸ–ಕಾರ್ಯಗಳು ಹೋಟೆಲ್‌ಗಳು ಹಾಗೂ ಖಾಸಗಿ ವಾಹನಗಳಲ್ಲಿ ನಡೆಯುತ್ತಿವೆ ಎಂದು ಆರೋಪಿಸಿದ ಅವರು, ಪಂಚಾಯಿತಿ ವ್ಯಾಪ್ತಿಯಲ್ಲಿ ನಿರೀಕ್ಷಿತ ಮಟ್ಟದ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶೋಬಿತ್ ಗೌಡ ಮಾತನಾಡಿ,

–3ನೇ ಪುಟಕ್ಕೆ

ಮತದಾರರ ಪಟ್ಟಿ ಪರಿಷ್ಕರಣೆ: ಜಾಗೃತಿ ಜಾಥಾ



ವಿರಾಜಪೇಟೆ: ಕೊಡಗು ಜಿಲ್ಲಾ ಪಂಚಾಯಿತಿ, ವಿರಾಜಪೇಟೆ ಪುರಸಭೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಶ್ರಯದಲ್ಲಿ, ಎಸ್‌ಐಆರ್ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಪಟ್ಟಣದಲ್ಲಿ ಶನಿವಾರ ಜಾಗೃತಿ ಜಾಥಾ ನಡೆಯಿತು.

ವಿರಾಜಪೇಟೆ ಪುರಸಭೆ ಕಚೇರಿ ಆವರಣದಲ್ಲಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿ ಪಿ.ಕೆ.ನಾಚಪ್ಪ, ಸಮಗ್ರ ಮತದಾರರ ಪಟ್ಟಿಯನ್ನು ನಿಖರವಾಗಿ ಪರಿಷ್ಕರಿಸುವ ಉದ್ದೇಶದಿಂದ ಪಟ್ಟಣ ವ್ಯಾಪ್ತಿಯಲ್ಲಿ ಜಾಗೃತಿ ಜಾಥಾ ನಡೆಸಲಾಗುತ್ತಿದೆ. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ತಿದ್ದುಪಡಿ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ. ಶನಿವಾರ ಮತ್ತು ಭಾನುವಾರ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯಲಿದೆ ಎಂದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕ ದಯಾನಂದ್ ಮಾತನಾಡಿ, ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವು ಎರಡು ದಿನ ನಡೆಯಲಿದೆ. ಸಾರ್ವಜನಿಕರು ಈ ಅವಕಾಶ ಬಳಸಿಕೊಂಡು ಮತದಾರರ ಪಟ್ಟಿಯಲ್ಲಿನ ವಿವರ ಪರಿಶೀಲಿಸಿ, ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಬೇಕು ಎಂದು ಹೇಳಿದರು.

ಜಾಥಾದಲ್ಲಿ ಕಾಲೇಜಿನ ಸಿಬ್ಬಂದಿ, ಪುರಸಭೆ ಸಿಬ್ಬಂದಿ, ಪೌರಕಾರ್ಮಿಕರು ಭಾಗವಹಿಸಿದ್ದರು.

ವರ್ಲ್ಡ್ ಮಿಕ್ಸ್ ಬಾಕ್ಸಿಂಗ್ ವಿಜೇತರಿಗೆ ಸೋಮವಾರಪೇಟೆಯಲ್ಲಿ ಸನ್ಮಾನ



ಸೋಮವಾರಪೇಟೆ: ಐಗೂರು ಗ್ರಾಮದ ಭಗತ್ ಸಿಂಗ್ ರಾಷ್ಟ್ರಪ್ರೇಮಿ ಯುವಕ ಸಂಘದಿಂದ ಗ್ರಾಮದ ಮುತ್ತಪ್ಪ ದೇವಾಲಯದ ಆವರಣದಲ್ಲಿ ಈಚೆಗೆ ನೇಪಾಳದಲ್ಲಿ ನಡೆದ ಕಾರ್ಯಕ್ರಮದಲ್ಲಿ ವರ್ಲ್ಡ್ ಮಿಕ್ಸ್ ಬಾಕ್ಸಿಂಗ್ ಪಂದ್ಯಾವಳಿಯಲ್ಲಿ ಜಯಗಳಿಸಿದ ನಾಲ್ಕು ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾಜೂರು ಸರ್ಕಾರಿ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಕೌಶಿಕ್ ಕುಮಾರ್ ಚಿನ್ನದ ಪದಕ ಪಡೆದಿದ್ದನು. ಸೋಮವಾರಪೇಟೆ ಜಿಎಂಪಿ ಶಾಲಾ ವಿದ್ಯಾರ್ಥಿ ಹಪೀಸ್ ಚಿನ್ನದ ಪದಕ, ಒಎಲ್‌ವಿ ಶಾಲೆ ವಿದ್ಯಾರ್ಥಿ ಯಾಸಿನ್ ಚಿನ್ನದ ಪದಕ ಹಾಗೂ ಜ್ಞಾನಗಂಗಾ ಶಾಲೆಯ ವಿದ್ಯಾರ್ಥಿ ಮನ್ವಿತ್ ಮೋಹನ್ ಬೆಳ್ಳಿ ಪದಕ ಪಡೆದಿದ್ದನು.

ಭಗತ್ ಸಿಂಗ್ ರಾಷ್ಟ್ರಪ್ರೇಮಿ ಯುವಕ ಸಂಘದ ಸಜಿ ಭರತ್, ಅವಿನಾಶ್, ನರಸಿಂಹ, ಅಜಿತ್ ಅಪ್ಪು ಇದ್ದರು.

ರೈತರ ರಕ್ಷಣೆ ನಮ್ಮ ಬದ್ಧತೆ: ಡಿಕೆಶಿ

ಬೆಂಗಳೂರು: ರೈತರ ರಕ್ಷಣೆ ನಮ್ಮ ಬದ್ಧತೆ, ರೈತರ ರಕ್ಷಣೆ ವಿಚಾರದಲ್ಲಿ ನಾನು ರಾಜಕಾರಣವನ್ನು ಬದಿಗಿಟ್ಟು ಒಗ್ಗೂಡಿ ಎಲ್ಲರೂ ರೈತರ ರಕ್ಷಣೆ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿಧಾನಸಭೆಯಲ್ಲಿಂದು ಹೇಳಿದರು.



ಪಶ್ಚಿಮಘಟ್ಟ ಭಾಗದ ಜನರ ಬದುಕಿಗೆ ಮಾರಕ ಎನಿಸಿರುವ ಡಾ. ಕಸ್ತೂರಿ ರಂಗನ್ ವರದಿ ಬಗ್ಗೆ ವಿಧಾನಸಭೆಯಲ್ಲಿಂದು ಮಹತ್ವದ ಚರ್ಚೆ ನಡೆದಿದ್ದು, ಪ್ರಾಸ್ತಾವಿಕವಾಗಿ ಚರ್ಚೆಯ ಆರಂಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಕಸ್ತೂರಿ ರಂಗನ್ ವರದಿಯ ಜಾರಿಯಿಂದ ಪಶ್ಚಿಮಘಟ್ಟದ ಜನರ ಬದುಕಿಗೆ ತೊಂದರೆಯಾಗುತ್ತದೆ ಎಂಬ ಆತಂಕ ವ್ಯಕ್ತವಾಗಿದೆ. ರೈತರ ಆತಂಕವನ್ನು ದೂರ ಮಾಡಿ ಅವರ ರಕ್ಷಣೆ ಮಾಡುವ ಬದ್ಧತೆ, ಆಶಯದೊಂದಿಗೆ ಈ ವಿಶೇಷ ಅಧಿವೇಶನವನ್ನು ಕರೆದಿದ್ದೇನೆ. ರೈತರ ರಕ್ಷಣೆ ನಮ್ಮ ಬದ್ಧತೆ ಎಂದರು.

ಪಶ್ಚಿಮಘಟ್ಟಕ್ಕೆ ಸಂಬಂಧಿಸಿದಂತೆ ಕಸ್ತೂರಿ ರಂಗನ್ ವರದಿಯ 10 ಜಿಲ್ಲೆಗಳ ಬದುಕಿಗೆ ಮಾರಕ, ಭಯದ ವಾತಾವರಣ ಆ ಭಾಗದಲ್ಲಿದ್ದು, ರೈತರ ಭಯ ಆತಂಕವನ್ನು ದೂರ ಮಾಡಲು ಏನು ಮಾಡಬೇಕು, ಯಾವ ರೀತಿಯ ತೀರ್ಮಾನಗಳನ್ನು ರಾಜ್ಯ ಸರ್ಕಾರ ಕೈಗೊಳ್ಳಬೇಕು ಎಂಬ ಬಗ್ಗೆ ಜನಪ್ರತಿನಿಧಿಗಳ ಅಭಿಪ್ರಾಯ ಪಡೆಯಲು ಈ ಅಧಿವೇಶನ ನಡೆಸಲಾಗುತ್ತಿದೆ. ಈ ಅಧಿವೇಶನದಲ್ಲಿ ವ್ಯಕ್ತವಾಗುವ ಅಭಿಪ್ರಾಯಗಳನ್ನು ಗಮನದಲ್ಲಿಟ್ಟುಕೊಂಡು ಜನರ ಬದುಕನ್ನು ರಕ್ಷಿಸಲು ಏನೆಲ್ಲಾ ಮಾಡಬೇಕೋ ಅದನ್ನು ನಾವು ನೀವು ಒಟ್ಟಾಗಿ ಮಾಡೋಣ. ರಾಜಕೀಯ ಬದಿಗಿಟ್ಟು ರೈತರ ರಕ್ಷಣೆ ಮಾಡೋಣ ಎಂದರು

ಕಸ್ತೂರಿ ರಂಗನ್ ವರದಿಯ ಭಯ ನಿವಾರಣೆಗೆ ಯಾವ ರೀತಿ ಕ್ರಮ ಕೈಗೊಳ್ಳಬೇಕು, ಏನು ಪರಿಹಾರ ಎಲ್ಲವನ್ನು ಚರ್ಚೆ ಮಾಡೋಣ. ಜನರ ಭಾವನೆ ಮೇಲೆ ನಾವುಗಳೆಲ್ಲಾ ತೀರ್ಮಾನ ಮಾಡಬೇಕಿದೆ ಎಂದು ಹೇಳಿದರು.

ಕಸ್ತೂರಿ ರಂಗನ್ ವರದಿಗೆ ಸಂಬಂಧಿಸಿದಂತೆ ವರದಿಯನ್ನು ತಿರಸ್ಕರಿಸಬೇಕು. ವರದಿ ಅಧ್ಯಯನಕ್ಕೆ ಉನ್ನತ ಮಟ್ಟದ ಸಮಿತಿ ರಚಿಸಬೇಕೋ, ಭೌತಿಕ ಸಮಿತಿ ರಚಿಸಬೇಕೋ, ಕೇರಳ ಮಾದರಿ ರಚಿಸಬೇಕೋ. ವಿಧಾನಸಭೆಯಲ್ಲಿ ವರದಿ ಜಾರಿ ವಿರೋಧಿಸಿ ನಿರ್ಣಯ ಕೈಗೊಳ್ಳಬೋಕೋ, ಕೇಂದ್ರ ಸರ್ಕಾರಕ್ಕೆ ಸರ್ವಪಕ್ಷಗಳ ನಿಯೋಗ ಕರೆದೊಯ್ಯಬೇಕು ಹೀಗೆ ಹತ್ತು ಹಲವು ಸಲಹೆಗಳು ಬಂದಿವೆ. ಸರ್ಕಾರವೇ ಈ ಬಗ್ಗೆ ತೀರ್ಮಾನ ಮಾಡುವುದು ಬೇಡ. ವಿಧಾನಸಭೆಯಲ್ಲಿ ಈ ಬಗ್ಗೆ ತೀರ್ಮಾನ ಮಾಡೋಣ ಎಂಬ ಆಶಯದೊಂದಿಗೆ ಅಧಿವೇಶನ ಕರೆದಿದ್ದೇನೆ. ರೈತರ ಬದುಕನ್ನು ರಕ್ಷಿಸಲು ಏನು ಮಾಡಬೇಕು ಎಂಬ ಸಲಹೆಗಳನ್ನು ಜನಪ್ರತಿನಿಧಿಗಳು ನೀಡಿದರೆ ಅದನ್ನು ಸರ್ಕಾರ ಸ್ವೀಕಾರ ಮಾಡುತ್ತದೆ ಎಂದರು.

ಈ ಹಿಂದೆ ಅಧಿವೇಶನ ನಡೆದಿತ್ತಾದರೂ ಪ್ರತಿಪಕ್ಷಗಳ ರಾಜಕೀಯ ಉದ್ದೇಶದಿಂದ ಏನನ್ನೂ ಚರ್ಚೆ ಮಾಡಲು ಆಗಲಿಲ್ಲ. ಜನರ ಭಾವನೆ ಬದುಕು ಮುಖ್ಯ. ಈಗಾಗಲೇ ರಾಜ್ಯದಲ್ಲಿ ಬರ ಇದೆ. 123 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದ್ದೇವೆ. ಹಾಗಾಗಿ ಈ ಎಲ್ಲ ವಿಚಾರಗಳ ಬಗ್ಗೆ ಚರ್ಚಿಸಲು ಅಧಿವೇಶನ ಕರೆದಿದ್ದೇವೆ. ನಾನು ಬರಪೀಡಿತ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ಅಲ್ಲಿನ ಪರಿಸ್ಥಿತಿಯನ್ನು ಕಣ್ಣಾರೆ ನೋಡಿದ್ದೇನೆ. ಶಾಸಕರುಗಳ ಜತೆಯೂ ಸಭೆಗಳನ್ನು ನಡೆಸಿ ಚರ್ಚಿಸಿದ್ದೇನೆ ಎಂದರು

ರೈತರಿಗೆ ತೊಂದರೆಯಾದರೆ ಅವರ ನೋವಿಗೆ ನಾವು ಸ್ಪಂದಿಸಬೇಕು. ಈ ಹಿಂದಿನ ಅಧಿವೇಶನದಲ್ಲಿ ಪ್ರತಿಪಕ್ಷಗಳು ರಾಜಕೀಯವಾಗಿ ಸಚಿವರೊಬ್ಬರ ರಾಜೀನಾಮೆಗೆ ಆಗ್ರಹಿಸಿ ಹೋರಾಟ ಮಾಡಿದ್ದರಿಂದ ಯಾವ ವಿಚಾರವೂ ಚರ್ಚೆಯಾಗಲಿಲ್ಲ. ನಿರಪರಾಧಿ ಸಚಿವರೊಬ್ಬರು ರಾಜೀನಾಮೆ ನೀಡಿದಂತಾಯಿತು ಎಂದು ಹೇಳಿದರು.

ನಾನು ಪಶ್ಚಿಮಘಟ್ಟದ ಪ್ರದೇಶದಲ್ಲೂ ಕಳೆದ 3-4 ದಿನಗಳಲ್ಲಿ ನಾನು ಪ್ರವಾಸ ಕೈಗೊಂಡು ಕಸ್ತೂರಿ ರಂಗನ್ ವರದಿ ಅಲ್ಲಿನ ರೈತರ ದು-ಃಖ ದುಮ್ಮಾನಗಳನ್ನು ಕೇಳಿ ಬಂದಿದ್ದೇನೆ. ಈ ವಿಚಾರದಲ್ಲಿ ಸರ್ಕಾರ ನಡೆ ನಿಲುವು ಏನಿರಬೇಕು ಎಂಬ ಬಗ್ಗೆ ಈ ಸದನದಲ್ಲೇ ಮಾಡೋಣ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ವಿಪತ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ...

-1ನೇ ಪುಟದಿಂದ

ರಕ್ಷಣಾ ಕಾರ್ಯಗಳ ಚಿತ್ರಗಳು ಹಾಗೂ ಉದಾಹರಣೆ ಸಹಿತ ಮಾಹಿತಿ ನೀಡಿ ಪ್ರವಾಹ, ಭೂಕುಸಿತ, ಭೂಕಂಪ, ಕಟ್ಟಡ ಕುಸಿತ ಹಾಗೂ ಇತರ ತುರ್ತು

ಪರಿಸ್ಥಿತಿಗಳಲ್ಲಿ ಕೈಗೊಳ್ಳುವ ರಕ್ಷಣಾ ಕಾರ್ಯಗಳ ಕುರಿತು ಮಾಹಿತಿ ನೀಡಿದರು.

ವಿವಿಧ ವಿಪತ್ತು ಸಂದರ್ಭಗಳ ನೈಜ ಘಟನೆಗಳನ್ನು ವಿವರಿಸುವ ಮೂಲಕ ತುರ್ತು ಪರಿಸ್ಥಿತಿಯಲ್ಲಿ ಹೇಗೆ ನಿಭಾಯಿಸಬೇಕು, ಯಾವ ಕ್ರಮ ಕೈಗೊಳ್ಳಬೇಕು ಮತ್ತು ಯಾವ ತಪ್ಪುಗಳನ್ನು ತಪ್ಪಿಸಬೇಕು ಎಂಬ ವಿದ್ಯಾರ್ಥಿಗಳಿಗೆ ವಿವರಿಸಿದರು.

ವಿಪತ್ತು ಸಂಭವಿಸಿದಾಗ ಗಾಬರಿಯಾಗದೆ ಪರಿಸ್ಥಿತಿ ಅರ್ಥಮಾಡಿಕೊಳ್ಳುವುದು, ಮೊದಲು ಸ್ವಯಂ ಸುರಕ್ಷತೆ ಖಚಿತಪಡಿಸಿಕೊಳ್ಳುವುದು, ಅಗತ್ಯವಿದ್ದಲ್ಲಿ ಗಾಯಾಳುಗಳಿಗೆ ಸಹಾಯ ಮಾಡುವುದು ಹಾಗೂ ರಕ್ಷಣಾ ತಂಡಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಹಲವು ಪ್ರಮುಖ ಅಂಶಗಳ ಬಗ್ಗೆ ವಿವರಿಸಿದರು.

ವಿಪತ್ತು ಸಂದರ್ಭದಲ್ಲಿ ಸಮಯಪ್ರಜ್ಞೆ, ಧೈರ್ಯ, ಶಿಸ್ತು, ತಂಡದ ಸಹಕಾರ ಮತ್ತು ಮಾನವೀಯತೆ ಅತ್ಯಂತ ಮುಖ್ಯ. ಜತೆಗೆ ವಿದ್ಯಾರ್ಥಿಗಳಿಗೆ ವಿವಿಧ ತುರ್ತು ಪರಿಸ್ಥಿತಿಗಳಲ್ಲಿ ಹೇಗೆ ಕಾರ್ಯನಿರ್ವಹಿಸಬೇಕು ಎಂಬುದರ ಕುರಿತು ಪ್ರಾಯೋಗಿಕವಾಗಿ ತರಬೇತಿ ನೀಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಮೇಜರ್ ಪ್ರೊ.ರಾಘವ ಬಿ. ಅವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ವಿಪತ್ತುಗಳು ನೈಸರ್ಗಿಕವಾಗಿರಲಿ ಅಥವಾ ಮಾನವ ನಿರ್ಮಿತವಾಗಿರಲಿ, ಅವು ಯಾವುದೇ ಸಮಯದಲ್ಲಿ ಸಂಭವಿಸಬಹುದು ಎಂದು ಹೇಳಿದರು.

ಜೀವ ಮತ್ತು ಮರಣದ ನಡುವಿನ ಸೂಕ್ಷ್ಮ ಪರಿಸ್ಥಿತಿ ಎದುರಿಸಲು ನಾವು ಸದಾ ಸಿದ್ಧರಾಗಿರಬೇಕು ಮತ್ತು ಜೀವ ರಕ್ಷಕ ತರಬೇತಿ ಪಡೆದಿರಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಇಂತಹ ತರಬೇತಿಗಳ ಮೂಲಕ ಅಗತ್ಯ ಕೌಶಲ್ಯಗಳನ್ನು ಪಡೆದುಕೊಂಡು, ವಿಪತ್ತು ಸಂದರ್ಭದಲ್ಲಿ ಧೈರ್ಯದಿಂದ ಕಾರ್ಯನಿರ್ವಹಿಸಿ ಜೀವಗಳನ್ನು ಉಳಿಸುವ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಿ ದೇಶ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಶೈಲಶ್ರೀ ಕೆ. ಹಾಗೂ ಅಲೋಕ್ ಕೆ.ಬಿಜೈ, ಎನ್‌ಎಸ್‌ಎಸ್ ಮತ್ತು ವೈಆರ್‌ಸಿ ಘಟಕಗಳ ಕಾರ್ಯಕ್ರಮಾಧಿಕಾರಿಗಳು, ಕಾಲೇಜಿನ ಬೋಧಕ ಸಿಬ್ಬಂದಿ ಹಾಗೂ ಎನ್‌ಡಿಆರ್‌ಎಫ್ ತಂಡದ ಸದಸ್ಯರು ಉಪಸ್ಥಿತರಿದ್ದರು. ಕಾಲೇಜಿನ ಎಲ್ಲಾ ಎನ್‌ಸಿಸಿ, ಎನ್‌ಎಸ್‌ಎಸ್ ಹಾಗೂ ವೈಆರ್‌ಸಿ ಸ್ವಯಂಸೇವಕರು ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

ಕಾರ್ಯಕ್ರಮವು ಭುವನಾ ಮತ್ತು ತಂಡದ ಪ್ರಾರ್ಥನೆಯೊಂದಿಗೆ ಆರಂಭವಾಯಿತು. ಎನ್‌ಸಿಸಿ ಕ್ಯಾಡೆಟ್ ಸಂದೇಶ್ ಅವರು ಸ್ವಾಗತ ಭಾಷಣ ಮಾಡಿದರು. ಕಾರ್ಯಕ್ರಮದ ಕೊನೆಯಲ್ಲಿ ಎನ್ ಎಸ್ ಎಸ್ ಸ್ವಯಂ ಸೇವಕಿ ಕುಮಾರಿ ಮೇಘಾ ಅವರು ವಂದನಾರ್ಪಣೆ ಸಲ್ಲಿಸಿದರು. ತೃತೀಯ ಬಿ.ಕಾಂ ವಿದ್ಯಾರ್ಥಿನಿ ಕುಮಾರಿ ಕವನಾ ಅವರು ಕಾರ್ಯಕ್ರಮದ ನಿರೂಪಣೆಯನ್ನು ಯಶಸ್ವಿಯಾಗಿ ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮತ್ತು ಸ್ವಯಂಸೇವಕರು ವಿಪತ್ತು ಸಂದರ್ಭಗಳಲ್ಲಿ ಜವಾಬ್ದಾರಿಯುತವಾಗಿ, ಧೈರ್ಯದಿಂದ ಮತ್ತು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸುವ ಕೌಶಲ್ಯ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವಲ್ಲಿ ಯಶಸ್ವಿಯಾಯಿತು.

ಇದೇ ಸಂದರ್ಭದಲ್ಲಿ ಎನ್.ಡಿ.ಆರ್.ಎಫ್ ಸಿಬ್ಬಂದಿಗಳಿಂದ ಜೀವ ರಕ್ಷಕ ಸಾಮಗ್ರಿಗಳ ಕುರಿತು ಪ್ರದರ್ಶಿಸಲಾಯಿತು. ಹಾಗೂ ಅಪಘಾತ, ಅಗ್ನಿ ಅವಘಡ ಮತ್ತಿತರ ಸಂದರ್ಭದಲ್ಲಿ ಬಳಕೆಗೆ ಬರುವ ಪ್ರಥಮ ಚಿಕಿತ್ಸೆ, ಸಿಪಿಆರ್, ಇನ್ನಿತರ ವಿಕೋಪಗಳ ತುರ್ತು ಸಂದರ್ಭದಲ್ಲಿ ಪಾಲಿಸಬೇಕಾದ ಜೀವ ರಕ್ಷಕ ತರಬೇತಿಯನ್ನು ವಿದ್ಯಾರ್ಥಿಗಳಿಗೆ ನೀಡಲಾಯಿತು.

ಪ್ಲಾಸ್ಟಿಕ್ ಆಯಿತೀಗ ಬಿಸ್ಕತ್!

ವಿಜ್ಞಾನವು ಪ್ಲಾಸ್ಟಿಕ್ಕನ್ನು ಕಂಡುಹಿಡಿದಿದ್ದರಿಂದ ಮನುಕುಲಕ್ಕೆ ಆಗಿರುವ ಪ್ರಯೋಜನ ಹೆಚ್ಚೋ ಅಥವಾ ತೊಂದರೆ ಹೆಚ್ಚೋ ಎಂದು ಆಲೋಚಿಸಬೇಕಾದ ಸಮಯ ಈಗ ಬಂದಿದೆ. ಪ್ಲಾಸ್ಟಿಕ್ ತ್ಯಾಜ್ಯ ಇಡಿಯ ಜಗತ್ತನ್ನು ಕಾಡುತ್ತಿದೆ; ಪರಿಸರವನ್ನು ನಾಶ ಮಾಡುತ್ತಿದೆ. ನಾವು ತಿನ್ನುವ ಆಹಾರವನ್ನೂ ಪ್ಲಾಸ್ಟಿಕ್ ಪ್ರವೇಶಿಸಿದೆ.

ಪ್ಲಾಸ್ಟಿಕ್‌ನಿಂದ ಇಷ್ಟೆಲ್ಲ ತೊಂದರೆಗಳು ಎದುರಾಗುತ್ತಿದ್ದರೂ, ಅದರಿಂದ ಪಾರಾಗುವ ದಾರಿಗಳು ಮಾತ್ರ ಕಾಣುತ್ತಿಲ್ಲ; ಸರ್ಕಾರ ಮತ್ತು ಜನರಲ್ಲಿ ಇಚ್ಛಾಸಂಕಲ್ಪವೂ ಕಾಣುತ್ತಿಲ್ಲ. ಈಗ ಹೊಸ ಸಂಶೋಧನೆಯೊಂದು ಬೆಳಕಿಗೆ ಬಂದಿದೆ. ಇದು ಪ್ಲಾಸ್ಟಿಕ್ ತ್ಯಾಜ್ಯವನ್ನು ತಿನ್ನುವ ಆಹಾರವಾಗಿ ಮಾರ್ಪಡಿಸಬಹುದಾದ ಸಾಧ್ಯತೆಯಷ್ಟೆ. ಈಗ ಪರೋಕ್ಷರೂಪದಲ್ಲಿ ಪ್ಲಾಸ್ಟಿಕ್ಕನ್ನು ಆಹಾರವಾಗಿ ತಿನ್ನುತ್ತಿದ್ದೇವೆ; ಮುಂದೆ ಪ್ರತ್ಯಕ್ಷವಾಗಿಯೇ ತಿನ್ನಬಹುದು. ಹೀಗೆಂದು ಇದನ್ನು ತುಂಬ ಸಂಭ್ರಮಿಸಬೇಡಿ. ಇದೊಂದು ಸಾಧ್ಯತೆ ಮಾತ್ರವೇ; ಇದರ ಸಾಧಕ-ಬಾಧಕಗಳನ್ನೂ ಗಮನಿಸಬೇಕಾಗುತ್ತದೆ.

ಪರಿಸರನಾಶಕ್ಕೆ ಕಾರಣವಾಗುವ ಅತಿ ದೊಡ್ಡ ಹಾನಿಕಾರಕ ಅಂಶವೆಂದರೆ ಪ್ಲಾಸ್ಟಿಕ್. ನಾನಾ ವಿಧಗಳಲ್ಲಿ, ರೂಪಗಳಲ್ಲಿ ಅದು ಪ್ರಕೃತಿಗೆ ಹಾನಿಯನ್ನು ಉಂಟುಮಾಡುತ್ತಲೇ ಇದೆ. ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಬೇಕು ಎಂಬ ನುಡಿಗಟ್ಟಿಗೆ ಅನುಗುಣವಾಗಿ ವಿಜ್ಞಾನಿಗಳು ಪ್ಲಾಸ್ಟಿಕ್‌ನಿಂದ ಬಿಸ್ಕತ್ತುಗಳನ್ನು ಮಾಡಬಹುದು ಎಂದು ಸಂಶೋಧಿಸಿದ್ದಾರೆ.

ಪ್ಲಾಸ್ಟಿಕ್ ಕಣಗಳನ್ನು ಅಥವಾ ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಸಂಸ್ಕರಿಸಿ ತಿನ್ನುವ ಪದಾರ್ಥಗಳನ್ನಾಗಿ ಮಾರ್ಪಡಿಸುವ ವಿನೂತನ ಸಂಶೋಧನೆಯೊಂದು ಇತ್ತೀಚೆಗೆ ಬೆಳಕು ಕಂಡಿದೆ.

ಆಗಸ್ಟ್ 23 ರಿಂದ 27ರವರೆಗೆ ಅಮೆರಿಕದ ಶಿಕಾಗೋದಲ್ಲಿ ನಡೆದ ಎಸಿಎಸ್ ಫಾಲ್ ಮೀಟಿಂಗ್ (ಅಮೆರಿಕನ್ ಕೆಮಿಕಲ್ ಸೊಸೈಟಿ) ಆಯೋಜಿಸಿದ್ದ ಸಮ್ಮೇಳನದಲ್ಲಿ ಕಾರ್ಬನ್‌ಡೇಲ್ ನಗರದ ಸೌತ್ ಇಲಿನಾಯ್ ವಿಶ್ವವಿದ್ಯಾಲಯದ ವಿಜ್ಞಾನಿಗಳಾದ ಭಾರತೀಯ ಸಂಜಾತೆ ಸಂಧ್ಯಾ ಜಯಶೇಖರ, ಇಸಾಬೆಲ್ ಹೂಇ, ಭಾಗ್ಯಶ್ರೀ ಕೊಲಿತಾ, ಎಲ್‌ವುಡ್ ಶೆಫ್ಲಿನ್ ಹಾಗೂ ಲಹಿರು ಜಯಕೋಡಿ ತಾವು ಅಭಿವೃದ್ಧಿಪಡಿಸಿರುವ ಪ್ಲಾಸ್ಟಿಕ್



ಬಿಸ್ಕತ್‌ಗಳ(ಕುಕಿ) ಕುರಿತಾದ ತಮ್ಮ ಸಂಶೋಧನೆಯನ್ನು ಮಂಡಿಸಿದ್ದಾರೆ.

ಪ್ಲಾಸ್ಟಿಕ್ ಮತ್ತು ಕೃಷಿತ್ಯಾಜ್ಯವನ್ನು ತಿನ್ನಬಹುದಾದ ಪ್ರೋಟೀನ್‌ಗಳು ಹಾಗೂ ಸುವಾಸನೆ ನೀಡುವ ಅಣುಗಳಾಗಿ ಪರಿವರ್ತಿಸಿ ಇವುಗಳೊಡನೆ ಈಸ್ಟ್‌ಗಳನ್ನು ಸೇರಿಸಿ ತಿನ್ನುವ ಆಹಾರಪದಾರ್ಥಗಳಾಗಿ ಪರಿವರ್ತಿಸುವ ರೀತಿಯನ್ನು ಕಂಡುಹಿಡಿದ್ದಾರೆ. ಈ ವಿಧಾನಕ್ಕೆ ಅವರು 'ಮೈಕ್ರೋ ಬೈಟ್ಸ್' ಎಂದು ಹೆಸರಿಟ್ಟಿದ್ದಾರೆ.

'ಪ್ಲಾಸ್ಟಿಕ್ ತ್ಯಾಜ್ಯವನ್ನು ಮರುಬಳಕೆಯ ಉತ್ಪನ್ನಗಳಾಗಿ ಪರಿವರ್ತಿಸಲು ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುತ್ತಲೇ ಇದ್ದೇವೆ. ಈ ದಾರಿಯಲ್ಲಿ ಹೊಳೆದದ್ದೇ ಪ್ಲಾಸ್ಟಿಕ್‌ತ್ಯಾಜ್ಯದಿಂದ ಆಹಾರ ತಯಾರಿಸುವ ಆಲೋಚನೆ. ಪ್ಲಾಸ್ಟಿಕ್ ಕೂಡ ಇಂಗಾಲದಿಂದ ಕೂಡಿದೆ, ಆಹಾರವೂ ಇಂಗಾಲವನ್ನು ಒಳಗೊಂಡಿದೆ. ಇದೇ ನಮ್ಮ ಸಂಶೋಧನೆಗೆ ನಾಂದಿ ಹಾಡಿತು' ಎಂಬುದು ಲಹಿರು ಜಯಕೋಡಿ ಅವರ ಮಾತುಗಳು.

ಪ್ಲಾಸ್ಟಿಕ್ ವಸ್ತು/ತ್ಯಾಜ್ಯಗಳಲ್ಲಿರುವ 'ಪಾಲಿಥಿಲೀನ್ ಟೆರೆಫ್ತಲೇಟ್' ಹಾಗೂ ಕಡಿಮೆ ಗುಣಮಟ್ಟದ ಸಿಹಿಜೋಳ (ಮೆಕ್ಕೆಜೋಳ)ಸಸ್ಯಗಳ ಕಾಂಡಗಳು ಮತ್ತು ಎಲೆಗಳನ್ನು 'ಆಕ್ಸಿಡೇಟಿವ್ ಹೈಡ್ರೋಥರ್ಮಲ್ ಡಿಸಾಲ್ಯೂಷನ್' ಎಂಬ ಪ್ರಕ್ರಿಯೆಗೆ ಒಳಪಡಿಸಲಾಗುತ್ತದೆ. ಈ ಪ್ರಕ್ರಿಯೆಯಲ್ಲಿ ಶಾಖವನ್ನು ಬಳಸಿ ಪ್ಲಾಸ್ಟಿಕ್ ಕಣಗಳೊಂದಿಗೆ ಆಹಾರದ 'ಫರ್ಮಂಟೇಷನ್'ಗೆ

ಆರೋಗ್ಯವೇ ಭಾಗ್ಯ

ಬೆಳಿಗ್ಗೆ ಚಹಾ ಅಥವಾ ಕಾಫಿಗಿಂತ ಈ 4 ತೂಕ ನಷ್ಟ ಪಾನೀಯಗಳನ್ನು ಕುಡಿಯಿರಿ

ನಿಮ್ಮ ಬೆಳಿಗ್ಗೆಯನ್ನು ಚಹಾ ಅಥವಾ ಕಾಫಿಯೊಂದಿಗೆ ಪ್ರಾರಂಭಿಸುತ್ತೀರಾ? ಇದರ ಪರ್ಯಾಯವಾಗಿ ಈ 4 ತೂಕ ನಷ್ಟ ಪಾನೀಯಗಳನ್ನು ಸೇವಿಸಿ.



ಎದ್ದ ತಕ್ಷಣ ಖಾಲಿ ಹೊಟ್ಟೆಯಲ್ಲಿ ಕಾಫಿ ಅಥವಾ ಚಹಾ ಕುಡಿಯುವ ಅಭ್ಯಾಸವನ್ನು ಅನೇಕರು ರೂಢಿಸಿಕೊಂಡು ಬಂದಿರುತ್ತಾರೆ. ಈ ಅಭ್ಯಾಸವು ಅವರು ದಿನವಿಡೀ ಹುಮ್ಮಸ್ಸಿನಿಂದ ಇರಲು ಸಹಾಯ ಮಾಡುತ್ತದೆ.

ಬೆಳಗಿನ ಸಮಯದಲ್ಲಿ ಬಿಸಿ ಬಿಸಿ ಪಾನೀಯ ಹಿತವಾಗಿದ್ದರೂ ಕೂಡ ಖಾಲಿ ಹೊಟ್ಟೆಯಲ್ಲಿ ಸೇವಿಸುವುದು ಆರೋಗ್ಯಕರವಲ್ಲ. ಕಾರಣ, ಬೆಳಿಗ್ಗೆ ಚಹಾ ಅಥವಾ ಕಾಫಿಯನ್ನು ಸೇವಿಸುವುದರಿಂದ ಹೊಟ್ಟೆಯ ಆಮ್ಲದ ಉತ್ಪಾದನೆಯು ಹೆಚ್ಚಾಗಬಹುದು. ಅಲ್ಲದೆ, ಇದು ಸಂಭಾವ್ಯ ಜೀರ್ಣಕಾರಿ ಅಸ್ವಸ್ಥತೆ, ಪೋಷಕಾಂಶಗಳನ್ನು ಹೀರಿಕೊಳ್ಳುವಲ್ಲಿ ಅಡಚಣೆ ಮತ್ತು ರಕ್ತದಲ್ಲಿನ ಸಕ್ಕರೆಯ ಏರಿಳಿತಗಳಿಗೆ ಕಾರಣವಾಗಬಹುದು. ಹಾಗಾಗಿ ಈ ಪಾನೀಯಗಳ ಪರ್ಯಾಯವಾಗಿ ಲೇಖನದಲ್ಲಿ ಹೇಳಲಾಗಿರುವ 4 ಪಾನೀಯಗಳನ್ನು ಕುಡಿಯಲು ನಾವು ಶಿಫಾರಸು ಮಾಡುತ್ತೇವೆ.

ಅರಿಶಿನ-ಕರಿಮೆಣಸು ನೀರು

ಬೆಳಗಿನ ಕಾಫಿ ಅಥವಾ ಚಹಾದ ಪರ್ಯಾಯವಾಗಿ ಅರಿಶಿಣ ಹಾಗು ಕರಿಮೆಣಸು ಮಿಶ್ರಿತ ಪಾನೀಯವನ್ನು ಸೇವಿಸಬಹುದು.

ಹೀಗೆ ಮಾಡಿ

ಬೆಚ್ಚಗಿನ ನೀರಿನಲ್ಲಿ 2-3 ಚಿಟಿಕೆ ಅರಿಶಿನ ಮತ್ತು ಕರಿಮೆಣಸು ಸೇರಿಸಿ ಕುಡಿಯಿರಿ. ಇದು ನಿಮ್ಮ ದಿನವನ್ನು ಪ್ರಾರಂಭಿಸಲು ಸೂಪರ್ ಆರೋಗ್ಯಕರ ಬೆಳಿಗ್ಗೆ ಪಾನೀಯವಾಗಿದೆ. ಈ ಶಕ್ತಿಯುತ ಪಾನೀಯವು ನಿಮ್ಮ ಚಯಾಪಚಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಮತ್ತು ಹೆಚ್ಚುವರಿ ಕೊಬ್ಬನ್ನು ತೊಡೆದುಹಾಕಲು ಉತ್ತೇಜಿಸುತ್ತದೆ. ಒಟ್ಟಾರೆ ತೂಕ ನಿಯಂತ್ರಣಕ್ಕೂ ಈ ಪಾನೀಯ ಬೆಸ್ಟ್ ಆಗಿದೆ.

ಜೀರಾ, ಫೆನ್ನೆಲ್ ಬೀಜಗಳು, ಅಜ್ವೈನ್ ನೀರು

ನಿಮ್ಮ ದಿನವನ್ನು ಹುಮ್ಮಸ್ಸಿನಿಂದ ಪ್ರಾರಂಭಿಸಲು ಜೀರಾ, ಫೆನ್ನೆಲ್ ಬೀಜಗಳು, ಅಜ್ವೈನ್ ನೀರು ಬಹಳ ಉತ್ತಮವಾಗಿದೆ.

ಹೀಗೆ ತಯಾರಿಸಿ

2 ಕಪ್ ನೀರನ್ನು ತೆಗೆದುಕೊಂಡು ಅದರಲ್ಲಿ ಒಂದು ಚಿಟಿಕೆ ಜೀರಿಗೆ, ಸೌನ್ಫ್ (ಫೆನ್ನೆಲ್ ಬೀಜಗಳು) ಮತ್ತು ಅಜ್ವೈನ್ (ಕೇರಂ ಬೀಜಗಳು) ಕುದಿಸಿ. ನೀರು ಅರ್ಧಕ್ಕೆ ಇಳಿಸಿದ ನಂತರ, ಅದನ್ನು ಸೋಸಿಕೊಂಡು ನಿಧಾನವಾಗಿ ಸಿಪ್ ಮಾಡಿ. ಈ ತೂಕ ನಷ್ಟ-ಸ್ನೇಹಿ ಪಾನೀಯವು ಜೀರ್ಣಕ್ರಿಯೆಯನ್ನು ಸುಧಾರಿಸಲು ಮತ್ತು ಹೊಟ್ಟೆ ಉಬ್ಬರಕ್ಕೆ ಚಿಕಿತ್ಸೆ ನೀಡುತ್ತದೆ.

ನಿಂಬೆ ನೀರು

ನಿಂಬೆ ನೀರು ದೇಹಕ್ಕೆ ಏನೆಲ್ಲಾ ಜಾದು ಮಾಡುತ್ತದೆ ಎಂಬುದು ನಿಮಗೆ ಈಗಾಗಲೇ ತಿಳಿದಿದೆ. ಬೆಚ್ಚಗಿನ ನೀರಿನಲ್ಲಿ ಅರ್ಧ ನಿಂಬೆ ಹಿಸುಕಿ ರುಚಿಗೆ ಸ್ವಲ್ಪ ಜೇನುತುಪ್ಪವನ್ನು ಸೇರಿಸಬಹುದು. ಈ ಪಾನೀಯವನ್ನು ಹೆಚ್ಚು ಶಕ್ತಿಯುತವಾಗಿಸಲು, ನೀವು ಒಂದು ಪಿಂಚ್ ದಾಲ್ಚಿನ್ನಿ ಕೂಡ ಸೇರಿಸಬಹುದು. ಬೆಳಿಗ್ಗೆ ಎದ್ದ ತಕ್ಷಣ ಈ ಪಾನೀಯ ಕುಡಿಯುವುದು ನಿಮ್ಮನ್ನು ಸೂಪರ್ ರಿಫ್ರೆಶ್ ಆಗಿಸಬಹುದು. ಅಲ್ಲದೆ, ಇದು ನಿಮ್ಮ ದೇಹದಿಂದ ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ಇದು ನಿಮ್ಮ ಚರ್ಮಕ್ಕೆ ಆರೋಗ್ಯಕರ ಪಾನೀಯವು ಹೌದು.

ಬೆಚ್ಚಗಿನ ನೀರು

ಈ ಮೇಲಿನ ಪಾನೀಯ ಮಾಡಲು ಸಮಯವಿಲ್ಲ ಅಥವಾ ಕುಡಿಯಲು ಇಷ್ಟವಿಲ್ಲ ಅನ್ನುವವರು ಉಗುರು ಬೆಚ್ಚಗಿನ ನೀರನ್ನು ಸಹ ಕುಡಿಯಬಹುದು.

ಇದು ನಿಮ್ಮ ದೇಹವನ್ನು ಹೈಡ್ರೇಟ್ ಮಾಡಲು ಸಹಾಯ ಮಾಡುತ್ತದೆ. ಜೊತೆಗೆ ನಿಮ್ಮ ಚಯಾಪಚಯವನ್ನು ವೇಗಗೊಳಿಸಿ, ದೇಹದಿಂದ ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ.

ಹಾಗಾದರೆ ಚಹಾ ಅಥವಾ ಕಾಫಿಯನ್ನು ಯಾವಾಗ ಸೇವಿಸಬೇಕು

ಇನ್ನು ಚಹಾ ಮತ್ತು ಕಾಫಿ ಪ್ರೇಮಿಗಳು ದಿನದ ಯಾವ ಸಮಯದಲ್ಲಿ ಕುಡಿಯಬಹುದು? ನಿಮ್ಮ ಉಪಹಾರದ ನಂತರ ಸುಮಾರು 30 ನಿಮಿಷಗಳ ನಂತರ ಕುಡಿಯುವುದು ಒಳ್ಳೆಯದು.

ನೆನೆಸಿದ ಬಾದಾಮಿ ಅಥವಾ ಕುಂಬಳಕಾಯಿ ಬೀಜಗಳಂತಹ ಬೀಜಗಳನ್ನು ತಿನ್ನಿರಿ. ಒಣದ್ರಾಕ್ಷಿ, ಖರ್ಜೂರ ಅಥವಾ ತಾಜಾ ಹಣ್ಣುಗಳನ್ನು ಕೂಡ ಆರಿಸಿಕೊಳ್ಳಬಹುದು.

ಇವುಗಳಲ್ಲಿ ಯಾವುದನ್ನಾದರೂ ತಿಂದ ಸ್ವಲ್ಪ ಸಮಯದ ನಂತರ, ನೀವು ನಿಮ್ಮ ಚಹಾ ಅಥವಾ ಕಾಫಿಯನ್ನು ಸೇವಿಸಬಹುದು. ಅತಿಯಾದ ಚಹಾ, ಕಾಫಿ ಸೇವನೆಯು ನಿಮ್ಮ ದೇಹ ಸ್ವೀಕರಿಸದೇ ಇರಬಹುದು. ಮಿತವಾಗಿ ಕುಡಿಯಲು ಸಲಹೆ ನೀಡುತ್ತೇವೆ.



ಗೌರಿ ಗಣೇಶೋತ್ಸವದ ಕಥಾ ಪ್ರದರ್ಶನ ರಂಜಿಸಿತು

ನಾಪೋಕ್ಲು: ಗೌರಿ ಗಣೇಶೋತ್ಸವದ ಅಂಗವಾಗಿ ಪಟ್ಟಣದ ವಿವಿಧ ಗಣೇಶ ಸೇವಾ ಸಮಿತಿಗಳಿಂದ ಪ್ರತಿಷ್ಠಾಪಿಸಲಾಗಿದ್ದ ಗೌರಿ ಗಣೇಶ ಮೂರ್ತಿಗಳ ಶೋಭಾಯಾತ್ರೆ ಶುಕ್ರವಾರ ಸಂಜೆ ವಿಜೃಂಭಣೆಯಿಂದ ನಡೆಯಿತು.

ಕಕ್ಕುಂದ ಕಾಡಿನ ವೆಂಕಟರಮಣ ದೇವಸ್ಥಾನದ ಗಣಪತಿ ಸೇವಾ ಸಮಿತಿಯಿಂದ 21ನೇ ವರ್ಷದ ಗೌರಿ ಗಣೇಶ ಉತ್ಸವ ನಡೆಯಿತು.

ಶುಕ್ರವಾರ ಮಧ್ಯಾಹ್ನ ಮಹಾಪೂಜೆಯ ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ನೆರವೇರಿತು. ವಿಟ್ಲದ ಕಲಾ ರಸಿಕರ ಹಾರ್ಟ್ ರಂಗ್‌ದ ಮಜಲ್ ತಂಡದಿಂದ ತಂಡದ ಡೊಳ್ಳು ಕುಣಿತ ಹಾಗೂ ಕೀಲುಗೊಂಬೆ ಸೇರಿದಂತೆ ವಿವಿಧ ಕಲಾತಂಡಗಳ ನೃತ್ಯದೊಂದಿಗೆ ಅಲಂಕೃತ ಮಂಟಪಗಳ ಮೆರವಣಿಗೆ ಸಾಗಿ ಜನಮನ ರಂಜಿಸಿತು. ಸಂತ ಮೈದಾನದಲ್ಲಿ ಸಾರ್ವಜನಿಕರಿಗೆ ಅನ್ನದಾನ ಏರ್ಪಡಿಸಲಾಗಿತ್ತು.

ಇಂದಿರಾನಗರ ವಿವೇಕಾನಂದ ಸಂಘದ ಗಣೇಶೋತ್ಸವ ಸೇವಾ ಸಮಿತಿಯ 21ನೇ ವರ್ಷದ ಉತ್ಸವದಲ್ಲಿ ಸ್ಥಳೀಯರಿಂದ ಹಾಡುಗಾರಿಕೆ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರವಿ ಬಳಗದಿಂದ ಸಂಗೀತ ಸಂಜೆ ಜರುಗಿತು.





ವಿಸರ್ಜನೆ ಸಂದರ್ಭ ಅಲಂಕೃತ ಭವ್ಯ ಮಂಟಪದಲ್ಲಿ ಪ್ರಶಾಂತ್ ಮಡಿಕೇರಿ ಲೈಟಿಂಗ್ಸ್ ಅರುಣ್ ತಂಡದಿಂದ ಸೌಂಡ್ಸ್ ಆದಿವಾಸಿ ಬಳಗದಿಂದ ಕುಣಿತ ಮನೋರಂಜನ ಕಾರ್ಯಕ್ರಮಗಳೊಂದಿಗೆ ಅದ್ಧೂರಿ ಶೋಭಾಯಾತ್ರೆ ನಡೆಯಿತು. ಚಲಿಸುವ ಪೌರಾಣಿಕ ಕಥಾ ರೂಪಕ ವಿಘ್ನ ನಿವಾರಕ ವಿನಾಯಕನಿಂದ ಮಹಿಷಾಸುರ ಸಂಹಾರ, ಆಕರ್ಷಕ ಮಂಟಪ ಹಾಗೂ ಪಟಾಕಿ ಚಿತ್ತಾರಗಳು ಪ್ರಮುಖ ಆಕರ್ಷಣೆಯಾಗಿದ್ದವು.

ಹಳೆತಾಲೂಕಿನ ಪೊನ್ನುಮುತ್ತಪ್ಪ ವಿನಾಯಕ ಸೇವಾ ಸಮಿತಿಯ 17ನೇ ವರ್ಷದ ಉತ್ಸವದಲ್ಲಿ ಮಡಿಕೇರಿಯ ತಂಡದಿಂದ ಚಲಿಸುವ ಬೃಹತ್ ಗಾತ್ರದ ದೇವತೆ ಹಾಗೂ ರಾಕ್ಷಸರ ಪ್ರತಿರೂಪಗಳನ್ನೊಳಗೊಂಡ ಗಣೇಶನ ಕಥಾವಸ್ತು ಪ್ರದರ್ಶನಗೊಂಡಿತು. ಆದಿವಾಸಿ ಬಳಗದಿಂದ ಕುಣಿತ, ಬೆಂಗಳೂರಿನ ತಂಡದ ಆಕರ್ಷಕ ಲೈಟಿಂಗ್ಸ್, ಸೌಂಡ್ಸ್ ಹಾಗೂ ಸಿಡಿಮದ್ದು ಪ್ರದರ್ಶನ ಸಾರ್ವಜನಿಕರನ್ನು ರೋಮಾಂಚನಗೊಳಿಸಿತು.

ಸುಂಟಿಕೊಪ್ಪ ಸಹಕಾರ ಸಂಘ ರೂ. 59 ಲಕ್ಷ ಲಾಭ ಗಳಿಕೆ

ಸುಂಟಿಕೊಪ್ಪ: ಸುಂಟಿಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವು 2025-26ನೇ ಸಾಲಿನಲ್ಲಿ 59,53,671 ಲಾಭ ಗಳಿಸಿದೆ.

ಸಂಘದ ಅಧ್ಯಕ್ಷ ಜೆರ್ಮಿ ಡಿಸೋಜ ಅವರ ಅಧ್ಯಕ್ಷತೆಯಲ್ಲಿ ಶನಿವಾರ ವಾರ್ಷಿಕ ಸಭೆ ನಡೆಯಿತು.

ಜೆರ್ಮಿ ಡಿಸೋಜ ಮಾತನಾಡಿ, ಸಂಘದ ಪ್ರಗತಿಯ ಬಗ್ಗೆ ಮಾಹಿತಿ ನೀಡಿದರಲ್ಲದೇ, ಸಂಘದಲ್ಲಿ 1999 ಮಂದಿ ಸದಸ್ಯರಿದ್ದು, ಇದರಲ್ಲಿ ಎ ಸದಸ್ಯರ ಪಾಲು ಹಣ 86,272,280, ಸರ್ಕಾರದ ಪಾಲು 78,000 ಆಗಿರುತ್ತದೆ.

ಸಾಲ ಮರುಪಾವತಿ ಪ್ರಮಾಣವು ಶೇ 98.50 ಇದೆ. ಸರ್ಕಾರದ ಬಡ್ಡಿ ರಿಯಾಯಿತಿ ಯೋಜನೆ ಜಾರಿಯಲ್ಲಿದೆ ಎಂದರು.

ಚಂದ್ರಶೇಖರ್ ಮಾತನಾಡಿ, ಸಂಘದ ಸದಸ್ಯರ ಮಕ್ಕಳಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ನಂತರದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರದಿಂದ ವಂಚಿತರಾಗಿದ್ದಾರೆ. ಉನ್ನತ ಶಿಕ್ಷಣ ಪಡೆಯುವ ಎಲ್ಲ ಮಕ್ಕಳಿಗೂ ಮೊದಲ ಮೂರು ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಬೇಕೆಂದು ಆಗ್ರಹಿಸಿದರು.

ಸಂಘದ ಹಿರಿಯ ಸದಸ್ಯ ಬಾಲಕೃಷ್ಣ ರೈ ಮಾತನಾಡಿ, ಕಳೆದ ಸಭೆಯಲ್ಲಿ ಆನೇಕ ಪ್ರಶ್ನೆ, ಅದಕ್ಕೆ ಸಂಬಂಧಿಸಿದ ಉತ್ತರ ಪಡೆದಿದ್ದೇವೆ. ಆದರೆ ಯಾವುದೇ ದಾಖಲಾತಿ ಪುಸ್ತಕದಲ್ಲಿ ನಮೂದುಗೊಳ್ಳದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.



ಬಿ.ಜಿ.ಜವಹರ್ ಮಾತನಾಡಿ, ಇತರ ಬ್ಯಾಂಕ್‌ಗೆ ಇರುವ ರೀತಿಯಲ್ಲಿ 2ನೇ ಹಾಗೂ 4ನೇ ಶನಿವಾರ ರಜೆ ನೀಡುವ ಬಗ್ಗೆ ಯಾವುದೇ ಚರ್ಚೆ ಆಗದಿದ್ದರೂ ನಾವು ರಜೆ ಕೇಳಿದ್ದೇವೆ ಎಂಬ ರೀತಿಯಲ್ಲಿ ನಿರ್ಣಯ ನಮೂದಿಸಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು. ಈ ಲೋಪವನ್ನು ಸರಿಪಡಿಸಿಕೊಳ್ಳುವ ಬಗ್ಗೆ ಅಧ್ಯಕ್ಷರು ಮಾಹಿತಿ ನೀಡಿದರು.

ಸಂಘದ ಹಿರಿಯ ಸದಸ್ಯ ಕೆ.ಡಿ.ರಾಮಯ್ಯ ಮಾತನಾಡಿ, ಸಂಘದ 59 ಲಕ್ಷ ಲಾಭದಲ್ಲಿ 28 ಲಕ್ಷ ಬಾಡಿಗೆ ರೂಪದಲ್ಲಿ ಬಂದಿದೆ. ಉಳಿದ ಲಾಭಾಂಶ ಸಾಲದು ಎಂದು ಹೇಳಿದರು. ಸಂಘದ ಆರ್ಥಿಕ ವ್ಯವಹಾರ ಹೆಚ್ಚು ಮಾಡಲು ಸಲಹೆ ನೀಡಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಸುಂಟಿಕೊಪ್ಪ ನಾಡು ಪ್ರೌಢಶಾಲೆಯ ಎ.ಎಸ್.ಶ್ರೀಶಾ, ದೇಚಮ್ಮ ಮತ್ತು ಸೌಮ್ಯ ಪಿಯುಸಿ ಕಲಾ ವಿಭಾಗದಲ್ಲಿ ರಕ್ಷಿತ ಮತ್ತು ಪಲ್ಲವಿ, ವಾಣಿಜ್ಯ ವಿಭಾಗದಲ್ಲಿ ಅಫ್ರಿನ್ ಮತ್ತು ಕೆ.ಎನ್.ಯಶವಂತ್, ವಿಜ್ಞಾನ ವಿಭಾಗದಲ್ಲಿ ಕೆ.ಆರ್.ದೀಪಕ್ ಮತ್ತು ಶಿಫಾ ಪ್ರತಿಭಾ ಪುರಸ್ಕಾರ ಪಡೆದರು.

ಎನ್.ಸಿ.ಕ್ಲೈವಾ ಪೊನ್ನಪ್ಪ, ಪಿ.ಪಿ.ಉದಯಕುಮಾರ್, ಎನ್.ಸಿ.ಪೊನ್ನಪ್ಪ, ಡಿ.ಬಿ.ರಮೇಶ್‌ಚಂಗಪ್ಪ, ಕೆ.ಎಸ್. ಮಂಜುನಾಥ್, ಡಿ.ಕೆ.ಗಂಗಾಧರ, ಡಾ.ಶಶಿಕಾಂತ್ ರೈ, ಬಿ.ಜಿ.ಜವಹರ್, ಕರುಣ, ಕೆ.ಪಿ.ಜಗನ್ನಾಥ್, ಕೆ.ಆರ್. ಮಂಜುನಾಥ, ಡಿ.ಎಚ್.ಚಂದ್ರಶೇಖರ್, ಬಿ.ಕೆ.ದಯಾನಂದ, ಪಿ.ಪಿ.ಲೀಲಾವತಿ, ಕೆ.ವಿ.ರಮ್ಯ, ಸುಮಿತ್ರ ಇದ್ದರು.

ಬರ ಪಟ್ಟಿಗೆ ಕುಶಾಲನಗರ ಸೇರ್ಪಡೆಗೆ ಒತ್ತಾಯ

ಕುಶಾಲನಗರ: ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗೆ ತೀವ್ರ ಹಿನ್ನಡೆ ಉಂಟಾಗಿ ರೈತಾಪಿ ವರ್ಗ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಕುಶಾಲನಗರ ತಾಲ್ಲೂಕು ಪರಪೀಡಿತ ತಾಲ್ಲೂಕು ಪಟ್ಟಿಗೆ ಸೇರಿಸುವಂತೆ ಸರ್ಕಾರಕ್ಕೆ ಪತ್ರ ಬರೆಯಲು ಭಾನುವಾರ ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮಹಾಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ಗ್ರಾಮದ ರೈತ ಸಮುದಾಯ ಭವನದಲ್ಲಿ ಆಯೋಜಿಸಿದ್ದ ತೊರೆನೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಟಿ.ಬಿ.ಜಗದೀಶ್ ಅಧ್ಯಕ್ಷತೆಯಲ್ಲಿ ನಡೆದ 2025-26ನೇ ಸಾಲಿನ ವಾರ್ಷಿಕ ಮಹಾಸಭೆ ನಡೆಯಿತು.

ಬರಪೀಡಿತ ತಾಲ್ಲೂಕು ಪಟ್ಟಿಗೆ ಕುಶಾಲನಗರ ತಾಲ್ಲೂಕು ಸೇರ್ಪಡೆ ಮಾಡದಿರುವ ಬಗ್ಗೆ ಸಂಘದ ಸದಸ್ಯರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಕೂಡಲೇ ಸರ್ಕಾರಕ್ಕೆ ಪತ್ರ ಬರೆದು ಒತ್ತಾಯಿಸುವಂತೆ ಆಗ್ರಹಿಸಿದರು.

ಚಿನ್ನಾಭರಣ ಸಾಲವನ್ನು ?20 ಲಕ್ಷದವರೆಗೆ ಏರಿಕೆ ಮಾಡಲು ಹಾಗೂ ಜಾಮೀನು ಸಾಲ ?2 ಲಕ್ಷ ಏರಿಸಲು ಸದಸ್ಯರ ಒಮ್ಮತದೊಂದಿಗೆ ಸಂಘದ ಬೈಲಾ ತಿದ್ದುಪಡಿ



ವಿಧೇಯಕಕ್ಕೆ ಅಂಗೀಕಾರ ನೀಡಲಾಯಿತು.

ಸಂಘದ ಲಾಭಾಂಶದಲ್ಲಿ ಶೇ 7ರಷ್ಟು ಡಿವಿಡೆಂಟ್ ಸದಸ್ಯರಿಗೆ ನೀಡಲು ತೀರ್ಮಾನಿಸಲಾಯಿತು. 200 ಇದ್ದ ಭತ್ಯೆಯನ್ನು 300ಕ್ಕೆ ಏರಿಸಲು ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಯಿತು.

ಸದಸ್ಯ ಟಿ.ಕೆ.ಪಾಂಡುರಂಗ ಮಾತನಾಡಿ, ರೈತ ಭವನಕ್ಕೆ ಮೂಲ ಸೌಕರ್ಯ ಕಲ್ಪಿಸಿ ಸುಸಜ್ಜಿತವಾದ ಭವನ ನಿರ್ಮಾಣ ಮಾಡಲು ಆಡಳಿತ ಮಂಡಳಿ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಟಿ.ಸಿ.ಶಿವಕುಮಾರ್ ಮಾತನಾಡಿ, ರೈತರ ಅನುಕೂಲಕ್ಕಾಗಿ ಸಂಘದ ಮೂಲಕವೇ ರಾಸಾಯನಿಕ ಗೊಬ್ಬರ ಮಾರಾಟ ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಸಂಘದ ಅಧ್ಯಕ್ಷ ಟಿ.ಬಿ.ಜಗದೀಶ್ ಮಾತನಾಡಿ, ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರುವ ರೈತಾಪಿ ವರ್ಗದ ಅನುಕೂಲತೆಗಾಗಿ ಕೃಷಿ ಪತ್ತಿನ ಸಹಕಾರ ಸಂಘ ಶ್ರಮಿಸುತ್ತಿದೆ ಎಂದರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಪ್ರೀತು, ವಾರ್ಷಿಕ ವರದಿ ಹಾಗೂ ಲೆಕ್ಕಪತ್ರ ಮಂಡಿಸಿ ಅನುಮೋದನೆ ಪಡೆದರು.ಸಂಘದ ಉಪಾಧ್ಯಕ್ಷೆ ಗೌರಮಣಿ ನಿರ್ದೇಶಕರಾದ ಕೆ.ಎಸ್.ಕೃಷ್ಣೇಗೌಡ, ಎಚ್.ಬಿ.ಚಂದ್ರಪ್ಪ, ಕೆ.ಬಿ.ದೇವರಾಜ್, ಉದಯಕುಮಾರ್, ಎಚ್.ಟಿ.ಕುಶಾಲಪ್ಪ, ಎಚ್.ಸಿ.ಮೂರ್ತಿ, ಟಿ.ಜೆ.ರವಿಕುಮಾರ್, ಟಿ.ಎ.ರವಿಚಂದ್ರ, ಟಿ.ಎಸ್.ಹರೀಶ್, ಹೇಮಾ, ಮೇಲ್ವಿಚಾರಕ ಭರತ್ ಕುಮಾರ್ ಪಾಲ್ಗೊಂಡಿದ್ದರು.

ಪಿಡಿಓ ವರ್ಗಾವಣೆಗೆ ಶಿಫಾರಸು ಭರವಸೆ...

-1ನೇ ಪುಟದಿಂದ

PDO ಅವರ ಕಾರ್ಯವೈಖರಿ ಕುರಿತು ಹಲವು ಬಾರಿ ತಾಲೂಕು ಮಟ್ಟದ ಅಧಿಕಾರಿಗಳ ಗಮನಕ್ಕೆ ತಂದು ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಹೇಳಿದರು.

ಅನಿಲ್ ಮಾತನಾಡಿ, ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎರಡು ಕುಡಿಯುವ ನೀರಿನ ಘಟಕಗಳು ಪದೇಪದೇ ಕೆಟ್ಟು ಹೋಗುತ್ತಿವೆ. ಈ ಹಿಂದೆ ?5ಕ್ಕೆ ದೊರೆಯುತ್ತಿದ್ದ ನೀರಿನ ದರವನ್ನು ಇದೀಗ ?10ಕ್ಕೆ ಹೆಚ್ಚಿಸಲಾಗಿದೆ. ದರ ಹೆಚ್ಚಳದಿಂದ ಸಂಗ್ರಹವಾಗುತ್ತಿರುವ ಆದಾಯವನ್ನು ಯಾವ ಉದ್ದೇಶಕ್ಕೆ ಬಳಸಲಾಗುತ್ತಿದೆ ಎಂಬುದನ್ನು ಪಂಚಾಯಿತಿ ಸಾರ್ವಜನಿಕರಿಗೆ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಭಾನುವಾರದ ಸಂತೆ ಬಳಿಕ ಸಮರ್ಪಕವಾಗಿ ಸ್ವಚ್ಛತೆ ಮಾಡದಿರುವುದರಿಂದ ಸಮೀಪದ ಎರಡು ಶಾಲೆಗಳ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ ಎಂದು ಕೊಡ್ಲಿಪೇಟೆ ಒಕ್ಕಲಿಗ ಯುವ ವೇದಿಕೆ ಕಾರ್ಯದರ್ಶಿ ಅವಿನಾಶ್ ಆರೋಪಿಸಿದರು. ಸಂತೆ ಮುಗಿದ ತಕ್ಷಣ ಕಸ ಹಾಗೂ ತ್ಯಾಜ್ಯ ತೆರವುಗೊಳಿಸಬೇಕು ಎಂದು ಒತ್ತಾಯಿಸಿದರು.

ಒಕ್ಕಲಿಗ ಯುವ ವೇದಿಕೆ ಅಧ್ಯಕ್ಷ ಸಚಿನ್ ಮಾತನಾಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಕಾರ್ಯವೈಖರಿ ಹಾಗೂ ಆಡಳಿತ ನಿರ್ವಹಣೆ ಕುರಿತು ಸಾರ್ವಜನಿಕರಲ್ಲಿ ಅಸಮಾಧಾನವಿದೆ ಎಂದು ಹೇಳಿದರು. ಸಂಬಂಧಪಟ್ಟ ಮೇಲಧಿಕಾರಿಗಳು ಕಾರ್ಯವೈಖರಿಯ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಲೋಪಗಳು ದೃಢಪಟ್ಟರೆ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಂಗಡಿ ಪರವಾನಿಗೆ ವಿಚಾರದಲ್ಲಿ ತಾರತಮ್ಯ ನಡೆದಿದೆ ಎಂಬ ಆರೋಪವೂ ಕೇಳಿಬಂತು. ಹಲವು ವರ್ಷಗಳಿಂದ ಅಂಗಡಿ ನಡೆಸುತ್ತಿರುವ ಸಿದ್ದೀಕ್ ಅವರು, ಈ ಬಾರಿ ಅಂಗಡಿ ಪರವಾನಿಗೆಗಾಗಿ ?1.5 ಲಕ್ಷ ಪಾವತಿಸುವಂತೆ ಸೂಚಿಸಲಾಗಿತ್ತು ಎಂದು ಆರೋಪಿಸಿದರು. ಆದರೆ, ಇದೇ ಪಂಚಾಯಿತಿಯಲ್ಲಿ ಇತರರಿಗೆ ?60 ಸಾವಿರಕ್ಕೆ ಅಂಗಡಿ ಪರವಾನಿಗೆ ನೀಡಲಾಗಿದೆ ಎಂದು ಆರೋಪಿಸಿದ ಅವರು, ಶುಲ್ಕದ ವ್ಯತ್ಯಾಸದ ಕುರಿತು ಪಂಚಾಯಿತಿ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಪಂಚಾಯಿತಿ ಸಾರ್ವಜನಿಕರ ಸೇವೆಗಾಗಿ ಇರುವ ಸಂಸ್ಥೆಯಾಗಿದ್ದು,

ಕುವೆಂಪು ವಿದ್ಯಾಸಂಸ್ಥೆ: ತಾಲ್ಲೂಕು ಮಟ್ಟದ ಕಬಡ್ಡಿ ಕ್ರೀಡಾಕೂಟ



ಸೋಮವಾರಪೇಟೆ: ಗ್ರಾಮೀಣ ಸೊಗಡಿನ ಕಬಡ್ಡಿಯಂತಹ ಕ್ರೀಡೆಗಳು ಆಟಗಾರರಲ್ಲಿ ಧೈರ್ಯ, ಶಿಸ್ತು, ಸಮಯಪ್ರಜ್ಞೆ ಹಾಗೂ ನಾಯಕತ್ವ ಗುಣಗಳನ್ನು ಬೆಳೆಸಲು ಸಹಕಾರಿ ಎಂದು ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಎ.ಆರ್. ಮುತ್ತಣ್ಣ ಹೇಳಿದರು.

ವಿಶ್ವಮಾನವ ಕುವೆಂಪು ವಿದ್ಯಾಸಂಸ್ಥೆಯ ಬಿಟಿಸಿಜಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ ಪದವಿ ಪೂರ್ವ ವಿಭಾಗದ ತಾಲ್ಲೂಕು ಮಟ್ಟದ ಕಬಡ್ಡಿ ಕ್ರೀಡಾಕೂಟಕ್ಕೆ ಶನಿವಾರ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಪಠ್ಯ ಶಿಕ್ಷಣದ ಜತೆಗೆ ಕ್ರೀಡೆಗೂ ಆದ್ಯತೆ ನೀಡಬೇಕು. ಕ್ರೀಡಾಕೂಟಗಳಲ್ಲಿ ಭಾಗವಹಿಸುವುದರಿಂದ ದೈಹಿಕ ಸದೃಢತೆಯೊಂದಿಗೆ ಆರೋಗ್ಯವೂ ಹೆಚ್ಚುತ್ತದೆ. ಕಬಡ್ಡಿ ಆಟಗಾರರು ಕ್ರೀಡಾ ನಿಯಮ ಪಾಲಿಸಿ ಆಟವಾಡಬೇಕು ಎಂದು ಹೇಳಿದರು.

ಕೆ.ಎಂ. ಜಗದೀಶ್ ಮಾತನಾಡಿ, ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಶಿಕ್ಷಣದ ಜತೆಗೆ ಕ್ರೀಡೆಗೂ ಮಹತ್ವದ ಸ್ಥಾನವಿದೆ. ಕ್ರೀಡೆಯಲ್ಲಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳು ಸೋಲು-ಗೆಲುವನ್ನು ಲೆಕ್ಕಿಸದೆ ಸ್ಪರ್ಧಿಸಬೇಕು. ತಾಲ್ಲೂಕು ಮಟ್ಟದ ಈ ಕ್ರೀಡಾಕೂಟವು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಮತ್ತು ಸಂಬಂಧ ವೃದ್ಧಿಗೆ ಸಹಕಾರಿ ಎಂದರು.

ಕಾಲೇಜಿನ ಪ್ರಾಂಶುಪಾಲೆ ಮಿಲ್ಡ್ರೆಡ್ ಗೋನ್ಸಾಲ್ವೆಸ್, ಕ್ರೀಡಾ ಸಂಯೋಜಕ ಅಶೋಕ್, ರಂಗಸ್ವಾಮಿ, ದೈಹಿಕ ಶಿಕ್ಷಣ ಶಿಕ್ಷಕ ಗೌಡಳ್ಳಿ ಪ್ರವೀಣ್, ಮಧು, ಆದರ್ಶ್ ಭಾಗವಹಿಸಿದ್ದರು.

ಪಠ್ಯೇತರ ಚಟುವಟಿಕೆಯಲ್ಲೂ ತೊಡಗಿಸಿಕೊಳ್ಳಿ ಡಾ.ದೇವರಾಜು ಸಲಹೆ



ಕುಶಾಲನಗರ: ವಿದ್ಯಾರ್ಥಿಗಳು ಶಿಕ್ಷಣ ದೊಂದಿಗೆ ಕ್ರೀಡೆ, ನೃತ್ಯ, ಸಂಗೀತ ಸೇರಿದಂತೆ ಇನ್ನಿತರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಮೂಲಕ ಸರ್ವತೋಮುಖ ಬೆಳವಣಿಗೆ ಹೊಂದಬೇಕು ಎಂದು ಪಿರಿಯಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ.ದೇವರಾಜು ಸಲಹೆ ನೀಡಿದರು.

ಬೈಚಬಹಳ್ಳಿಯ ವಿವೇಕಾನಂದ ಪದವಿಪೂರ್ವ ಕಾಲೇಜು ಮತ್ತು ಮಹಾತ್ಮ ಗಾಂಧಿ ಪದವಿ ಕಾಲೇಜು ಆಶ್ರಯದಲ್ಲಿ ಶುಕ್ರವಾರ ಆಯೋಜಿಸಿದ್ದ ಕಲಾಸಂಗಮ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಸ್ಪಷ್ಟ ಗುರಿಯೆಡೆಗೆ ಶಿಸ್ತಿನಿಂದ ಸಾಗಿದರೆ ಉತ್ತುಂಗಕ್ಕೆ ಏರಬಹುದು. ಸತತ ಪ್ರಯತ್ನ, ಸಮಯ ಪಾಲನೆ, ಪ್ರಾಮಾಣಿಕತೆ ರೂಢಿಸಿಕೊಂಡರೆ ಯಶಸ್ಸು ನಿಮ್ಮ ಪಾಲಾಗುತ್ತದೆ ಎಂದರು.

ವಿದ್ಯಾರ್ಥಿಗಳ ಯಶಸ್ಸಿ ಹಿಂದೆ ಉಪನ್ಯಾಸಕರ ಜೊತೆ ಪೋಷಕರ ಜವಾಬ್ದಾರಿ ಕೂಡ ಇದೆ. ಇತ್ತೀಚಿನ ದಿನಗಳಲ್ಲಿ ಯುವಜನಾಂಗ ಮಾದಕವಸ್ತು ಸೇವನೆ ಹಾಗೂ ದುಶ್ಚಟಗಳಿಗೆ ದಾಸರಾಗಿ ವಿದ್ಯಾರ್ಥಿ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಆದ್ದರಿಂದ ತಮ್ಮ ಮಕ್ಕಳ ಶೈಕ್ಷಣಿಕ ಪ್ರಗತಿ ಜೊತೆಗೆ ಇನ್ನಿತರ ಚಟುವಟಿಕೆಗಳ ಕುರಿತು ಪೋಷಕರು ಹೆಚ್ಚಿನ ನಿಗವಹಿಸಬೇಕು ಎಂದು ಸಲಹೆ ನೀಡಿದರು.

ವಿವೇಕಾನಂದ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಎನ್.ಎನ್.ಶಂಭುಲಿಂಗಪ್ಪ ಮಾತನಾಡಿ, ಶೈಕ್ಷಣಿಕ ಸಾಧನೆಯೊಂದಿಗೆ ಇತರೆ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡು ಏನಾದರೂ ಸಾಧಿಸುವ ಛಲ ಹೊಂದಬೇಕು. ವಿದ್ಯಾರ್ಥಿ ಜೀವನವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳು ಮತ್ತು ಪೋಷಕರನ್ನು ಗೌರವಿಸಲಾಯಿತು. ವಿದ್ಯಾರ್ಥಿಗಳು ಕಲಾಸಂಗಮದ ಅಂಗವಾಗಿ ಪ್ರದರ್ಶಿಸಿದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮ ಪ್ರೇಕ್ಷಕರ ಗಮನ ಸೆಳೆಯಿತು.

ವಿವೇಕಾನಂದ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲೆ ಕ್ಲಾರರೆಷ್ಮ, ಎಂಜಿಎಂ ಪದವಿ ಕಾಲೇಜಿನ ಪ್ರಾಂಶುಪಾಲೆ ಟಿ.ಎ.ಲಿಖಿತಾ, ಉಪನ್ಯಾಸಕ, ಸಿಬ್ಬಂದಿ ಪಾಲ್ಗೊಂಡಿದ್ದರು.

ಸಾಹಿತ್ಯಾಭಿರುಚಿ ಬೆಳೆಸಲು ದತ್ತಿನಿಧಿ ಸಹಕಾರಿ



ಮಡಿಕೇರಿ: ಸಾಹಿತ್ಯಾಭಿರುಚಿ ಬೆಳೆಸಲು ಮತ್ತು ಸಾಹಿತ್ಯ ಕ್ಷೇತ್ರದ ಬಗ್ಗೆ ಆಸಕ್ತಿ ಮೂಡಿಸಲು ದತ್ತಿನಿಧಿ ಸ್ಥಾಪನೆ ಸಹಕಾರಿಯಾಗಿದೆ ಎಂದು ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಎಂ.ಪಿ.ಕೇಶವ ಕಾಮತ್ ತಿಳಿಸಿದರು.ಕನ್ನಡ ಸಾಹಿತ್ಯ ಪರಿಷತ್ತು ಮೂರ್ನಾಡು ಹೋಬಳಿ ಘಟಕ, ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಸಾಹಿತ್ಯ ಪರಿಷತ್ತು ಮಡಿಕೇರಿ ತಾಲ್ಲೂಕು ಹಾಗೂ ಎಂ.ಇ.ಎಸ್ ಪ್ರೌಢಶಾಲೆ ಮೂರ್ನಾಡು ಇವರ ಸಂಯುಕ್ತ ಆಶ್ರಯದಲ್ಲಿ ಪ್ರೌಢಶಾಲೆಯ ಕಾವೇರಿ ಸಭಾಂಗಣದಲ್ಲಿ ನಡೆದ ಅವರೆಮಾದಂಡ ಶರಣ್ ಪೂಣಚ್ಚ ದತ್ತಿನಿಧಿ ಸ್ವೀಕಾರ, ಶಿಕ್ಷಣದ ಬೆಳಕು ಕಥಾಸ್ಪರ್ಧೆಯ ಬಹುಮಾನ ವಿತರಣೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಾಹಿತ್ಯ, ಸಮಾಜ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದವರ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸುವುದು ಉತ್ತಮ ಪರಂಪರೆಯಾಗಿದೆ. ಇಂತಹ ದತ್ತಿನಿಧಿಗಳ ಮೂಲಕ ಸಾಹಿತ್ಯಾಸಕ್ತರಿಗೆ ಹಾಗೂ ಸಮಾಜದ ವಿವಿಧ ವರ್ಗಗಳಿಗೆ ಪ್ರೋತ್ಸಾಹ ನೀಡಲು ಸಾಧ್ಯವಾಗುತ್ತದೆ ಎಂದರು.

ರಾಜ್ಯದಲ್ಲಿ ಈಗಾಗಲೇ 3 ಸಾವಿರಕ್ಕೂ ಅಧಿಕ ದತ್ತಿನಿಧಿ ಕಾರ್ಯಕ್ರಮಗಳು ನಡೆದಿದ್ದು, ಕೊಡಗು ಜಿಲ್ಲೆಯಲಿ 45 ದತ್ತಿನಿಧಿಗಳು ಸ್ಥಾಪನೆಯಾಗಿವೆ. ಶಾಲಾ-ಕಾಲೇಜುಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಮಕ್ಕಳಲ್ಲಿ ಸಾಹಿತ್ಯದ ಬಗ್ಗೆ ಆಸಕ್ತಿ ಮತ್ತು ಅರಿವು ಮೂಡಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮವನ್ನು ದೀಪ ಬೆಳಗಿಸಿ ಉದ್ಘಾಟಿಸಿ ಮಾತನಾಡಿದ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಟಿ.ಪಿ.ರಮೇಶ್, ಅಂಗನವಾಡಿ ಶಿಕ್ಷಕರು ಹಾಗೂ ಕಾರ್ಯಕರ್ತರಲ್ಲಿ ಕನ್ನಡ ಸಾಹಿತ್ಯದ ಬಗ್ಗೆ ಆಸಕ್ತಿ ಮತ್ತು ಅಭಿರುಚಿ ಬೆಳೆಸುವ ಉದ್ದೇಶದಿಂದ ರೂ.50 ಸಾವಿರ ದತ್ತಿನಿಧಿ ಸ್ಥಾಪಿಸಿರುವುದು ಶ್ಲಾಘನೀಯ ಕಾರ್ಯ ಎಂದರು.

ಅಂಗನವಾಡಿ ಶಿಕ್ಷಕರಿಗಾಗಿ ರೂ.50 ಸಾವಿರ ಮೊತ್ತದ ದತ್ತಿನಿಧಿ ಸ್ಥಾಪಿಸಿದ ಅವರೆಮಾದಂಡ ಶರಣ್ ಪೂಣಚ್ಚ ಅವರು ಮಾತನಾಡಿ, ಕನ್ನಡ ಭಾಷೆ, ಸಾಹಿತ್ಯದ ಉಳಿವು ಹಾಗೂ ಬೆಳವಣಿಗೆಗಾಗಿ ಮೂರ್ನಾಡು ಹೋಬಳಿ ಘಟಕ ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯ. ಅಂಬೆಗಾಲಿಡುವ ಮಗುವನ್ನು ಸಮಾಜಕ್ಕೆ ಪರಿಚಯಿಸುವವರು ಅಂಗನವಾಡಿ ಶಿಕ್ಷಕರು. ಮಗುವಿನ ಕೈಗೆ ಬಳಪ ಹಿಡಿಸಿ ಅಕ್ಷರ ಕಲಿಸುವ ಮೂಲಕ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವ ಅಂಗನವಾಡಿ ಶಿಕ್ಷಕರು ಹಾಗೂ ಕಾರ್ಯಕರ್ತರಿಗೆ ಸಣ್ಣ ಕಾಣಿಕೆಯಾಗಿ ಈ ದತ್ತಿನಿಧಿಯನ್ನು ಸ್ಥಾಪಿಸುತ್ತಿರುವುದಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಸಾಪ ಮೂರ್ನಾಡು ಹೋಬಳಿ ಘಟಕದ ಅಧ್ಯಕ್ಷೆ ಈರಮಂಡ ಹರಿಣಿ ವಿಜಯ್, ಅಂಗನವಾಡಿ ಶಿಕ್ಷಕರು ಹಾಗೂ ಕಾರ್ಯಕರ್ತರು ಮಕ್ಕಳಲ್ಲಿ ಜ್ಞಾನದ ಬೀಜ ಬಿತ್ತುವ ಮಹತ್ವದ ಸೇವೆ ಮಾಡುತ್ತಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಸಾಹಿತ್ಯಾಭಿರುಚಿ ಬೆಳೆಸುವ ಉದ್ದೇಶದಿಂದ ದತ್ತಿನಿಧಿ ಸ್ಥಾಪಿಸಿರುವುದು ಶ್ಲಾಘನಾರ್ಹ. ಮೂರ್ನಾಡು ಹೋಬಳಿ ಘಟಕದಲ್ಲಿ ಇದು ಎರಡನೇ ದತ್ತಿನಿಧಿಯಾಗಿದ್ದು, ಈ ಹಿಂದೆ ಹೋಬಳಿಯ ಶಿಕ್ಷಕರಿಗಾಗಿ ದತ್ತಿನಿಧಿ ಸ್ಥಾಪಿಸಲಾಗಿತ್ತು ಎಂದು ತಿಳಿಸಿದರು.

ಮುಂಬರುವ ದಿನಗಳಲ್ಲಿ ಕನ್ನಡ ರಾಜ್ಯೋತ್ಸವ ಸೇರಿದಂತೆ ಹಲವು ಕನ್ನಡಪರ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಹರಿಣಿ ವಿಜಯ್ ತಿಳಿಸಿದರು.

ಕನ್ನಡ ಸಾಹಿತ್ಯ ಪರಿತ್ತಿನ ಸದಸ್ಯತ್ವ ಅಭಿಯಾನಕ್ಕೂ ಕಾರ್ಯಕ್ರಮದಲ್ಲಿ ಚಾಲನೆ ನೀಡಲಾಯಿತು. ಪ್ರಭಾರ ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ಮೇಪಾಡಂಡ ಸವಿತಾ ಕೀರ್ತನ್ ಅವರು ಸದಸ್ಯತ್ವ ಅರ್ಜಿಯನ್ನು ಕರವಂಡ ಸುಮಿತಾ ಪೊನ್ನಮ್ಮ ಅವರಿಗೆ ನೀಡಿ ಸದಸ್ಯತ್ವ ಸ್ವೀಕರಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ 30ಕ್ಕೂ ಅಧಿಕ ಮಂದಿ ಕನ್ನಡಾಭಿಮಾನಿಗಳು ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಎಂ.ಇ.ಎಸ್. ಶಾಲೆಯ ಗೌರವ ಕಾರ್ಯದರ್ಶಿ ಪುದಿಯೋಕ್ಕಡ ಹರೀಶ್ ದೇವಯ್ಯ, ಮಠದಮನೆ ಧನಂಜಯ, ಹಿರಿಯ ಸಾಹಿತಿ ಕಿಗ್ಗಾಲು ಗಿರೀಶ್, ಸಾಹಿತಿ ಹಾಗೂ ನಿವೃತ್ತ ಪ್ರಾಂಶುಪಾಲೆ ದಂಬೆಕೋಡಿ ಸುಶೀಲ, ಈರಮಂಡ ವಿಜಯ್, ಸಂಘಟನೆ ಕಾರ್ಯದರ್ಶಿ ಅಬ್ದುಲ್ ಖಾದರ್, ಪದಾಧಿಕಾರಿ ಪುದಿಯೊಕ್ಕಡ ರಮ್ಯ ವಿಪಿನ್, ಮಹಮ್ಮದ್ ಕಡಂಗ, ತೇಲಪಂಡ ಗುಲ್ಜನ್, ದಿನೇಶ್ ಪೆಗ್ಗೋಳಿ, ಮಹಿಳಾ ಪ್ರತಿನಿಧಿ ಮೀನಾಕ್ಷಿ ಕೇಶವ್, ಮರಗೋಡು ಶ್ರೀ ಗಣಪತಿ ದೇವಸ್ಥಾನ ಭಜನಾ ಮಂಡಳಿಯ ಸದಸ್ಯರು ಸೇರಿದಂತೆ ಕಸಾಪ ಸದಸ್ಯರು, ಅಂಗನವಾಡಿ ಶಿಕ್ಷಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ನಂತರ ಮೂರ್ನಾಡು ಪದವಿ ಕಾಲೇಜಿನ ವಿದ್ಯಾರ್ಥಿಗಳಿಂದ ನೃತ್ಯ ಪ್ರದರ್ಶನ ನಡೆಯಿತು.

ಕನ್ನಡ ಭಾಷೆ ಉಳಿವಿಗೆ ಪ್ರತಿಯೊಬ್ಬರು ಶ್ರಮಿಸಬೇಕು – ವಿ.ವಿ.ಶಿವಪ್ಪ



ನಾಪೋಕ್ಲು: ಕನ್ನಡ ಭಾಷೆ ಉಳಿವಿಗೆ ಪ್ರತಿಯೊಬ್ಬರು ಶ್ರಮಿಸಬೇಕು. ಭಾಷೆಯನ್ನು ನಾವು ಕಲಿತು ಇತರರಿಗೆ ಕಲಿಸಿದಾಗ ಮಾತ್ರ ಕನ್ನಡ ಉಳಿಯಲು ಸಾಧ್ಯ ಎಂದು ಉಪನ್ಯಾಸಕ ವಿ.ವಿ.ಶಿವಪ್ಪ ಹೇಳಿದರು.

ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಮಡಿಕೇರಿ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಮೂರ್ನಾಡು ಪದವಿ ಕಾಲೇಜು ಸಹಯೋಗದಲ್ಲಿ ಶನಿವಾರ ನಡೆದ ದಿ.ಹಂಚೆಟ್ಟಿರ ಕುಟ್ಟಪ್ಪ, ಕಾಮವ್ವ ದಂಪತಿ ಜ್ಞಾಪಕಾರ್ಥ 'ಕೊಡಗಿನ ಜಾನಪದ ಕಲೆಗಳ ಪ್ರಕಾರಗಳು' ಕುರಿತು ಪದವಿ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಹಾಗೂ ದಿ.ಮಹಾಬಲೇಶ್ವರ ಭಟ್ ಜ್ಞಾಪಕಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನ್ನಡ ಭಾಷೆ ಬೆಳೆಯುತ್ತಿರುವುದು, ಉಳಿಯುತ್ತಿರುವುದು ಹಳ್ಳಿಗಳಿಂದ ಮತ್ತು ಜಾನಪದದಿಂದ ಎಂದರು.

ದತ್ತಿದಾನಿ ಹಂಚೆಟ್ಟಿರ ಫ್ಯಾನ್ಸಿ ಮುತ್ತಣ್ಣ ಮಾತನಾಡಿ, ದಿನನಿತ್ಯದ ಬದುಕಿಗೂ ಜಾನಪದಕ್ಕೂ ಅವಿನಾಭಾವ ಸಂಬಂಧವಿದೆ. ವಿದ್ಯಾರ್ಥಿಗಳು ಉದ್ಯೋಗ ನಿಮಿತ್ತ ನಗರಗಳಿಗೆ ತೆರಳಿದರೂ ಮಾತೃಭಾಷೆ ಮರೆಯಬಾರದು ಎಂದರು.

ಮಡಿಕೇರಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷೆ ಕಡ್ಲೇರ ತುಳಸಿ ಮೋಹನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮವನ್ನು ಪ್ರಾಂಶುಪಾಲರಾದ ಕಲ್ಪನಾ ಸಾಮ್ರಾಟ್ ಉದ್ಘಾಟಿಸಿದರು.

ವಿಜೇತರು: ಪ್ರಬಂಧ ಸ್ಪರ್ಧೆಯಲ್ಲಿ ದ್ವಿತೀಯ ಬಿ.ಕಾಂ ವಿದ್ಯಾರ್ಥಿನಿ ವೇದ ಪ್ರಥಮ, ಅಂತಿಮ ಬಿ.ಕಾಂ ವಿದ್ಯಾರ್ಥಿ ಮನೋಜ್ ದ್ವಿತೀಯ ಬಹುಮಾನ ಪಡೆದುಕೊಂಡರು.

ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಂ.ಪಿ.ಕೇಶವಕಾಮತ್ ಪ್ರಾಸ್ತಾವಿಕವಾಗಿ ಮಾತನಾಡಿದರು. ದತ್ತಿ ದಾನಿಗಳಾದ ಕುಮಾರ್ ಎನ್.ಎಂ, ಮೂರ್ನಾಡು ಹೋಬಳಿ ಕಸಾಪ ಅಧ್ಯಕ್ಷೆ ಈರಮಂಡ ಹರಿಣಿ ವಿಜಯ್, ಮಡಿಕೇರಿ ತಾಲ್ಲೂಕು ಕಸಾಪ ಗೌರವ ಕಾರ್ಯದರ್ಶಿ ಗುಡ್ಡೇರ ಲಕ್ಷ್ಮು ಸೋಮಣ್ಣ, ಮೂರ್ನಾಡು ಹೋಬಳಿ ಗೌರವ ಕಾರ್ಯದರ್ಶಿ ಕಟ್ಟೆಮನೆ ಮಹಾಲಕ್ಷ್ಮಿ, ಕೋಶಾಧಿಕಾರಿ ಮಡಿಯಂಡ ಸೂರಜ್, ಆಕಾಶ್, ಉಪನ್ಯಾಸಕ ಕಿಗ್ಗಾಲು ಹರೀಶ್ ಉಪಸ್ಥಿತರಿದ್ದರು.

ಸಂಸ್ಕೃತಿ-ಪರಂಪರೆ ಉಳಿವಿಗೆ ಶ್ರಮಿಸಿ; ಶಾಸಕ ಮಂತರ್ ಗೌಡ



ಸೋಮವಾರಪೇಟೆ: ಹಬ್ಬದ ಆಚರಣೆ ಪೂರ್ವಜರು ನಡೆಸಿಕೊಂಡು ಬಂದಂತೆ ನಾವು ಮುಂದುವರೆಸಿದಲ್ಲಿ ಮಾತ್ರ ಆಚಾರ-ವಿಚಾರಗಳು, ಸಂಸ್ಕೃತಿ ಮತ್ತು ಪರಂಪರೆ ಉಳಿಸಿ, ಮುಂದಿನ ಪೀಳಿಗೆಗೂ ಕೊಂಡೊಯ್ಯಲು ಸಾಧ್ಯ ಎಂದು ಶಾಸಕ ಡಾ.ಮಂತರ್ ಗೌಡ ಅಭಿಪ್ರಾಯಿಸಿದರು.

ತಾಲ್ಲೂಕು ಹಿಂದೂ ಮಲಯಾಳ ಸಮಾಜದಿಂದ ಜಾನಕಿ ಸಭಾಂಗಣದಲ್ಲಿ ಭಾನುವಾರ ನಡೆದ ಓಣಂ ಉತ್ಸವ ಹಾಗೂ ಸಮಾಜದ ದಶಮಾನೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಹಬ್ಬದ ಆಚರಣೆಗಳು ಸಾಮರಸ್ಯದ ಸಂಕೇತವಾಗಿದ್ದು, ಸಾಮೂಹಿಕ ಆಚರಣೆಗಳು ಸಂಭ್ರಮ ಹೆಚ್ಚಿಸುತ್ತವೆ. ಹಿಂದೂ ಮಲಯಾಳ ಸಮಾಜದ ಸಮುದಾಯ ಭವನ ನಿರ್ಮಾಣಕ್ಕೆ ಸರ್ಕಾರದಿಂದ ಅನುದಾನ ಒದಗಿಸಲಾಗುವುದು ಎಂದರು.

ಸಮುದಾಯದ ಮಕ್ಕಳಿಗೆ ಉನ್ನತ ಶಿಕ್ಷಣ ನೀಡಲು ಪೋಷಕರು ಮುಂದಾಗಬೇಕು. ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾಗಿರುವ ಗುರುವಾಯೂರು ಹಾಗೂ ಪರಶಿನಕಡವು ಕ್ಷೇತ್ರಕ್ಕೆ ಕೊಡಗಿನಿಂದ ಬಸ್ ವ್ಯವಸ್ಥೆ ಕಲ್ಪಿಸಲು ಪ್ರಯತ್ನ ನಡೆಸಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಎರ್ನಾಕುಲಂ ಶಿವಗಿರಿನಂದ ಮಠದ ಶಿವಸ್ವರೂಪಾನಂದ ಸ್ವಾಮೀಜಿ ಮಾತನಾಡಿ, ಮಕ್ಕಳಿಗೆ ಮನೆಯಿಂದಲೇ ಉತ್ತಮ ಸಂಸ್ಕಾರ ಕಲಿಸಬೇಕು. ಧಾರ್ಮಿಕತೆಯೊಂದಿಗೆ ಮಕ್ಕಳು ಬೆಳೆಯಬೇಕು. ದುಶ್ಚಟಗಳಿಂದ ದೂರವಿರುವಂತೆ ನೋಡಿಕೊಳ್ಳಬೇಕು. ಸಮುದಾಯದ ಹೆಣ್ಣುಮಕ್ಕಳ ರಕ್ಷಣೆಯಾಗಬೇಕು. ವಿವಾಹ ಸಂದರ್ಭದಲ್ಲಿ ಮತಾಂತರ, ಧರ್ಮಾಂತರ ಆಗದಂತೆ ಜಾಗ್ರತೆ ವಹಿಸಬೇಕು. ನಾವು ಎಷ್ಟೇ ಅದ್ದೂರಿ ಸಭೆ ಸಮಾರಂಭ ನಡೆಸಿದರೂ ಸಂಸ್ಕೃತಿಯ ಕೊಂಡಿ ಕಳಚಿದರೆ ಸಮುದಾಯ ಅಳಿಯುತ್ತದೆ ಎಂದು ಸಮುದಾಯ ಬಾಂಧವರಿಗೆ ಎಚ್ಚರಿಕೆ ನೀಡಿದರು.

ಹಿಂದೂ ಮಲಯಾಳ ಸಮಾಜದ ಅಧ್ಯಕ್ಷ ವಿ.ಎಂ.ವಿಜಯ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಕೇರಳ ಕಾಂಞಂಗಾಡ್ ಗೃಹಸ್ಥಾಶ್ರಮ ಮಠಾಧೀಶ ಗಂಗಾಜೀ ನಾಯರ್ ಸ್ವಾಮೀಜಿ, ಮಾಜಿ ಶಾಸಕರಾಧ ಎಂ.ಪಿ.ಅಪ್ಪಚ್ಚು ರಂಜನ್, ಕೆ.ಜಿ.ಬೋಪಯ್ಯ, ಹೈಕೋರ್ಟ್ ಹಿರಿಯ ವಕೀಲ ಎಚ್.ಎಸ್.ಚಂದ್ರಮೌಳಿ, ರಾಜ್ಯ ಒಕ್ಕಲಿಗರ ಸಂಘದ ಕೊಡಗು ಜಿಲ್ಲಾ ನಿರ್ದೇಶಕ ಹರಪಳ್ಳಿ ರವೀಂದ್ರ, ಚೌಡ್ಲು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕೆ.ಟಿ.ಪರಮೇಶ್, ಸಮಾಜದ ಪಿ.ಡಿ.ಪ್ರಕಾಶ್, ಎಂ.ಕೆ.ಮೋಹನ್, ಶೀಲಾ ಶಶಿ, ಕೆ.ಬಾಬು, ಸುಧೀರ್, ವಾಸುದೇವ್, ಡಾ.ಉದಯಕುಮಾರ್, ಕೆ.ಎಸ್.ಪದ್ಮನಾಭ, ವಿನೋದ್ ಕುಮಾರ್, ಓ.ಎಂ.ಸತೋಷ್, ಹರೀಂದ್ರನ್, ಕೆ.ಕೆ. ಬಾಲಕೃಷ್ಣ, ರಾಜೇಶ